ಸಂಪುಟ : 9 ಸಂಚಿಕೆ 222 ಪುಟ : 4 ಬೆಲೆ: 3.00 ಗುರುವಾರ ಅಕ್ಟೋಬರ್ 10 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 222 Pages : 4 Price : 3.00 Thursday October 10 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಅಕ್ಟೋಬರ್ 10 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ :** ವಾರ್ಡ್ ನಂ. 22 ಗಂಗಿಮಡಿ 1 ರಿಂದ 5ನೇ ಕ್ರಾಸ್, ಶಿವಪ್ಪರವರ, ಪಾಮಡೆ, ಉಕ್ಕಿಯವರ, ಸಫಾಯಿಯವರ, ನಿಂಗಪ್ಪರವರ, ವಾಯದಾರ, ಗಾರ್ಡನ್ ಲೈನ್‌ಗಳು ಉಳಿದ ಕೆಲವು ಭಾಗಗಳು. ವಾರ್ಡ್ ನಂ. 31, 32 - ದಾಸರ ಓಣಿ, ರಂಗನವಾಡ, ಕಿಲ್ಲಾ, ಜೋಡ ಮಾರುತಿ ಗುಡಿ, ಸಿಕ್ಕಲಿಗಾರ ಓಣಿ, ಝುಂಡಾ ಕಟ್ಟಿ, ಗುಜ್ಜರ ಬಸ್ತಿ, ಭಜಂತ್ರಿ ಓಣಿ, ಸುಣಗಾರ ಓಣಿ, ಹಳೆ ಕಚೇರಿ ರಸ್ತೆ, ದುರ್ಗಮ್ಮನ ಗುಡಿ, ತ್ರಿಕೋಟೇಶ್ವರ ಗುಡಿ ರಸ್ತೆ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 16, 21 - ಕುಷ್ಠರೋಗ ಕಾಲೋನಿ, ಅಂಬೇಡ್ಕರ್ ನಗರ, ಸುಣ್ಣದ ಭಟ್ಟಿ, ರಹಮತ್ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 30, 34 - ಹುಡ್ಕೋ ಕೆಲವು ಭಾಗಗಳು. ವಾರ್ಡ್ ನಂ. 6, 7 - ಪೆಂಡಾರ ಓಣಿ, ಮಲ್ಲೇಶಪ್ಪನ ಲೈನ್, ನಂದರಗಿ ಲೈನ್, ಅಬ್ಬಿಗೇರಿ ಲೈನ್, ಗಚ್ಚಿಯವರ ಲೈನ್, ಪಿಂಡಕೋರರವರ ಲೈನ್, ಕನ್ಯಾಳ ಅಗಸಿ, ಹುಚ್ಚನಗೌಡರ ಓಣಿ, ಚೆನ್ನೇಗೌಡರ ಓಣಿ, ಬಚ್ಚ ಲಕ್ಕಮ್ಮನ ಗುಡಿ ಲೈನ್, ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತ ಬಾಂದವರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

2024-25ನೇ ಸಾಲಿನ ಕೃಷಿ ಪ್ರಶಸ್ತಿ ಯೋಜನೆಯಡಿ ಹಿಂಗಾರು ಹಂಗಾಮಿನಲ್ಲಿ ಬೆಳೆ ಸ್ಪರ್ಧೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ರೈತರು ಆನ್‌ಲೈನ್‌ನಲ್ಲಿ ನೋಂದಾಯಿಸಿ. ಸಿಟಿಜನ್ ಲಾಗಿನ್ ಅಥವಾ ರೈತ ಸಂಪರ್ಕ ಕೇಂದ್ರದ ಲಾಗಿನ್ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ, ಸೇವಾ ಕೇಂದ್ರ, ಸ್ವತಃ, ಆಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಸದರಿ ಕೆ-ಕಿಸಾನ್ ಪೋರ್ಟಲ್ ನಡಿ ಅಗತ್ಯ ದಾಖಲಾತಿಗಳೊಂದಿಗೆ ತಮ್ಮ ಎಫ್.ಐ.ಡಿ.(ಫ್ರೂಟ್ಸ್ ಐಡೆಂಟಿಫಿಕೇಶನ್)ಯನ್ನು ಬಳಸಿಕೊಂಡು ಕಡಲೆ ಬೆಳೆಗೆ ನವೆಂಬರ್ 30 ರೊಳಗೆ **kkisan.karnataka.gov.in** ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ತಾಲೂಕ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡಲು ಜಂಟಿ ಕೃಷಿ ನಿರ್ದೇಶಕರು ಪ್ರಟಣೆಯಲ್ಲಿ ತಿಳಿಸಿರುತ್ತಾರೆ.

## ಅ.15ರಂದು ಪೂರ್ವಭಾವಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಕ್ಟೋಬರ್ 23ರಂದು ಆಚರಿಸಲಾಗುವ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ನಿಮಿತ್ತ ಅಕ್ಟೋಬರ್ 15ರಂದು ಬೆಳಿಗ್ಗೆ11 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಮಾಜದ ಮುಂಖಡರು, ಗಣ್ಯ ವ್ಯಕ್ತಿಗಳು ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೆಲವೇ ದಿನಗಳಲ್ಲಿ ರಾಜ್ಯ ರಾಜಕಾರಣದಲ್ಲಿ ಮಹತ್ತರ ಬದಲಾವಣೆ: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಭವಿಷ್ಯ

# ರಾಜ್ಯದ ಪ್ರಜೆಗಳು ದಡ್ಡರಲ್ಲ

**■ವಿಜಯಸಾಕ್ಷಿ ಸುದ್ದಿ, ಗದಗ**



ಅಹಿಂದ ಹೆಸರಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಅಹಿಂದ ಸಮುದಾಯಕ್ಕೆ ಅನ್ಯಾಯ ಮಾಡುತ್ತಿದೆ. ಮುಡಾದಲ್ಲಿ ಹಗರಣ ನಡೆದಿಲ್ಲ ಎಂದು ಹೇಳಿ 14 ನಿವೇಶನಗಳನ್ನು ಹಿಂದಿರುಗಿಸಲು ಮುಂದಾಗಿದ್ದಾರೆ. ಮುಖ್ಯಮಂತ್ರಿ ಸ್ಥಾನಪಲ್ಲಟವಾಗುತ್ತಿದೆ, ರಾಜ್ಯದ ಮುಖ್ಯಮಂತ್ರಿಗಳು ರಾಜೀನಾಮೆ ಕೊಡುವ ಹಂತದಲ್ಲಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ, ಶಾಸಕ ಬಿ.ವೈ. ವಿಜಯೇಂದ್ರ ಹೇಳಿದರು.

ಗದುಗಿನಲ್ಲಿ ಬುಧವಾರ ಬಿಜೆಪಿ ಸದಸ್ಯತಾ ಅಭಿಯಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಅವರು ಮಾಧ್ಯಮದವರೊಂದಿಗೆ ಮಾತನಾಡಿ, ಸಿದ್ದರಾಮಯ್ಯ ರಾಜೀನಾಮೆ ಕೊಡುವ ಹಂತಕ್ಕೆ ಬಂದು ನಿಂತಿದ್ದಾರೆ. ಕಾಂಗ್ರೆಸ್ ಹೈಕಮಾಂಡ್ ನಿರ್ಧಾರ ಮಾಡಿಯಾಗಿದೆ. ಮುಡಾ ವಿಚಾರದಲ್ಲಿ ಹಗರಣ ಆಗಿದೆ ಎಂದು ಸ್ವತಃ ಸಿಎಂ ಒಪ್ಪಿಕೊಂಡಿದ್ದಾರೆ. ಸೈಟ್ ಹಿಂದಿರುಗಿಸಿದ್ದಾರೆ. ರಾಜೀನಾಮೆ ಕೇಳಿದ್ದು, ರಾಜೀನಾಮೆಯನ್ನೂ ಕೊಡುತ್ತಾರೆ. ಬಹಳ ದಿನ ಭಂಡತನ ಮುಂದುವರೆಸಲು ಸಾಧ್ಯವಿಲ್ಲ. ಕಾಂಗ್ರೆಸ್‌ನಲ್ಲಿರುವ ಆಕಾಂಕ್ಷಿಗಳು ಚಾತಕ ಪಕ್ಷಿಯಂತೆ ಕಾಯುತ್ತಿದ್ದಾರೆ ಎಂದರು.

ಸಚಿವ ಸತೀಶ್ ಜಾರಕಿಹೊಳಿ ಭೇಟಿ ವಿಚಾರವಾಗಿ ಪ್ರತಿಕ್ರಿಯಿಸಿದ ಬಿ.ವೈ. ವಿಜಯೇಂದ್ರ, ನಾನು ಬಿಜೆಪಿ ರಾಜ್ಯಾಧ್ಯಕ್ಷ ಎನ್ನುವುದು ಎಷ್ಟು ಸತ್ಯವೋ ಶಿಕಾರಿಪುರ ಕ್ಷೇತ್ರದ ಶಾಸಕ ಎನ್ನುವುದೂ ಅಷ್ಟೇ ಸತ್ಯ. ನಮ್ಮ ಕ್ಷೇತ್ರದ ಅಭಿವೃದ್ಧಿ ವಿಚಾರವಾಗಿ ತಾಲೂಕಿನಿಂದ ಬಂದ ನಿಯೋಗದೊಂದಿಗೆ ಭೇಟಿಯಾಗಿದ್ದೇನೆ. ಇದರಲ್ಲಿ ರಾಜಕೀಯವೇನಿಲ್ಲ. ಕೆಲವೇ ದಿನದಲ್ಲಿ ರಾಜ್ಯ ರಾಜಕಾರಣದಲ್ಲಿ ಮಹತ್ತರ ಬದಲಾವಣೆಯಾಗಲಿದೆ. ಸಿದ್ದರಾಮಯ್ಯ ಅವರು ಐದು ವರ್ಷ ಸಿಎಂ ಆಗಿ ಮುಂದುವರೆಯಲಿದ್ದಾರೆ ಎಂದು ಹೇಳುವವರೆಲ್ಲರೂ ಸಿಎಂ ಸ್ಥಾನದ ಆಕಾಂಕ್ಷಿಗಳೇ ಆಗಿದ್ದಾರೆ ಎಂದು ವ್ಯಂಗ್ಯವಾಡಿದರು.

ರಾಜ್ಯದ ಪ್ರಜೆಗಳು ದಡ್ಡರಲ್ಲ. ರಾಜ್ಯದ ಜನ, ಶಾಸಕರು ಎಲ್ಲವನ್ನೂ ಗಮನಿಸುತ್ತಿದ್ದಾರೆ ಎಂದು ವಿಜಯೇಂದ್ರ ಪ್ರತಿಕ್ರಿಯಿಸಿದರು.

ಕುಟುಂಬ ರಾಜಕಾರಣದಿಂದ ಬಿಜೆಪಿ ಹಾಳಾಗಿದೆ ಎಂಬ ಈಶ್ವರಪ್ಪ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಈಶ್ವರಪ್ಪ ಈಗ ಬಿಜೆಪಿಯಲ್ಲಿಲ್ಲ. ಅವರ ಹೇಳಿಕೆಯ ಬಗ್ಗೆ ಯಾಕೆ ತಲೆ ಕೆಡಿಸಿಕೊಳ್ಳಬೇಕು, ರಾಜ್ಯದ ಜನರಿಗೆ ಎಲ್ಲವೂ ಗೊತ್ತಿದೆ. ಅವರಿಗೆ ಒಳ್ಳೆಯದಾಗಲಿ ಎಂದರು.



ಈ ಸಂದರ್ಭದಲ್ಲಿ ಶಾಸಕ ಸಿ.ಸಿ ಪಾಟೀಲ, ರೋಣ ಮಾಜಿ ಶಾಸಕ ಕಳಕಪ್ಪ ಬಂಡಿ, ವಿಧಾನ ಪರಿಷತ್ ಶಾಸಕ ಎಸ್.ವಿ. ಸಂಕನೂರು, ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಸೇರಿದಂತೆ ಮುಖಂಡರು ಇದ್ದರು.

> ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಯಾವುದೇ ಅಭಿವೃದ್ಧಿ ಕಾರ್ಯ, ಹೊಸ ಯೋಜನೆಗಳನ್ನು ಕೊಟ್ಟಿಲ್ಲ. ಗ್ಯಾರಂಟಿಗಳ ಬಗ್ಗೆ ಉದ್ದುದ್ದ ಭಾಷಣ ಮಾಡಿದರು, ಲೋಕಸಭಾ ಚುನಾವಣೆ ಬಳಿಕ ಗ್ಯಾರಂಟಿಗಳೂ ಬಹುತೇಕ ನಿಂತುಹೋಗಿವೆ. ಅಹಿಂದ ಹೆಸರಲ್ಲಿ ಅಧಿಕಾರಕ್ಕೆ ಬಂದು ಅಹಿಂದ ಸಮುದಾಯಕ್ಕೆ ಅನ್ಯಾಯ ಮಾಡುತ್ತಿದ್ದಾರೆ. ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಕರ್ನಾಟಕದ ಹಣ ದುರುಪಯೋಗವಾಗಿದೆ.
>
> **- ಬಿ.ವೈ. ವಿಜಯೇಂದ್ರ.**
> ಬಿಜೆಪಿ ರಾಜ್ಯಾಧ್ಯಕ್ಷ, ಶಾಸಕ.

### ದಸರಾ ಧರ್ಮ ಸಮ್ಮೇಳನದ 7ನೇ ದಿನದ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಉದಾತ್ತ ಮೌಲ್ಯಗಳೊಂದಿಗೆ ಬಾಳಬೇಕು

**■ವಿಜಯಸಾಕ್ಷಿ ಸುದ್ದಿ, ಅಬ್ಬಿಗೇರಿ (ಮಾನವ ಧರ್ಮ ಮಂಟಪ)**




ಧರ್ಮ, ಅರ್ಥ, ಕಾಮ, ಮೋಕ್ಷಗಳೆಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸದಿದ್ದಲ್ಲಿ ಮಾನವ ಜೀವನ ವ್ಯರ್ಥವಾಗಿ ಹೋಗುತ್ತದೆ. ಅಂತರಂಗ ಬಹಿರಂಗ ಶುದ್ಧಿಗೆ ವೀರಶೈವ ಧರ್ಮ ಆದ್ಯತೆಯನ್ನು ಕೊಟ್ಟಿದೆ. ತಾನು ಎಲ್ಲರಿಗಾಗಿ ಅನ್ನುವುದು ನಿಜವಾದ ಧರ್ಮ. ಎಲ್ಲರೂ ತನಗಾಗಿ ಅನ್ನುವುದು ಅಧರ್ಮವಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ 7ನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಆಧುನಿಕ ಯುಗದಲ್ಲಿ ಪ್ರಗತಿಪರ ವಿಚಾರ ಧಾರೆಗಳ ಹೆಸರಿನಲ್ಲಿ ಭಾರತೀಯ ಉತ್ಕೃಷ್ಟ ಸಂಸ್ಕೃತಿ ನಾಶಗೊಳ್ಳಬಾರದು. ದೇಶ ಮತ್ತು ಧರ್ಮ ಮಾನವನ ಎರಡು ಕಣ್ಣುಗಳಿದ್ದ ಹಾಗೆ. ಕ್ರಿಯಾಶೀಲ ಬದುಕು ಜೀವನದ ಶ್ರೇಯಸ್ಸಿಗೆ ಕಾರಣವಾಗುತ್ತದೆ. ಜಾತಿ-ಜನಾಂಗಳ ಗಡಿ ಮೀರಿ ಮಾನವೀಯ ಉದಾತ್ತ ಮೌಲ್ಯಗಳೊಂದಿಗೆ ಬಾಳಬೇಕೆಂಬುದನ್ನು ಎಲ್ಲರೂ ಅರಿಯಬೇಕು. ಬಿತ್ತಿದ ಬೀಜಕ್ಕೆ ನೀರು, ಗೊಬ್ಬರ ಎಷ್ಟು ಮುಖ್ಯವೋ ಅಷ್ಟೇ ನೀತಿಗೆ ಧರ್ಮವೂ ಅವಶ್ಯಕವಾಗಿದೆ. ಪರಿಶುದ್ಧ ಮತ್ತು ಪವಿತ್ರವಾದ ಜೀವನ ರೂಪಿತಗೊಳ್ಳಲು ಸತ್ಯ ಮತ್ತು ಪ್ರಾಮಾಣಿಕತೆ ಬೇಕು.

ಮನುಷ್ಯನ ಶಾಂತಿ ನೆಮ್ಮದಿಗೆ ತತ್ವ ಸಿದ್ಧಾಂತಗಳು ಮೂಲ ನೆಲೆಯಾಗಿವೆ. ಕಾಯಕ ಮತ್ತು ದಾಸೋಹದ ಮೂಲಕ ಸಾಮಾಜಿಕ ಸತ್ಕ್ರಾಂತಿ ಎಸಗಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಶಿವಾಗಮಗಳಲ್ಲಿ ವೀರಶೈವ ಧರ್ಮದ ಮೂಲ ಬೇರುಗಳನ್ನು ಕಾಣಬಹುದು. ವೀರಶೈವ ಧರ್ಮ ವೃಕ್ಷದ ಬೇರು ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರಾದರೆ ಶಿವಶರಣರು ಆ ವೃಕ್ಷದ ಹೂ-ಹಣ್ಣು ಇದ್ದಂತೆ. ಧರ್ಮದ ದೋಣಿಗೆ ರಂಧ್ರ ಕೊರೆಯುವ ಕೆಲಸವನ್ನು ಯಾರೂ ಮಾಡಬಾರದು. ಅಖಂಡತೆಗೆ ಇರುವ ಬೆಲೆ ಒಡಕಿಗೆ ಸಿಗಲಾರದೆಂಬ ಸತ್ಯವನ್ನು ಅರಿತು ಬಾಳಬೇಕಾಗುತ್ತದೆ ಎಂದರು.

> ಸಂಸ್ಕೃತಿ ಚಿಂತಕ, ಮೈಸೂರಿನ ಎ.ಆರ್. ರಘುರಾಮ್ ಮಾತನಾಡಿ, ಯುವ ಜನಾಂಗದಲ್ಲಿ ಧರ್ಮ ಪ್ರಜ್ಞೆ-ರಾಷ್ಟ್ರ ಪ್ರಜ್ಞೆ ಬೆಳೆಸುವ ನಿಟ್ಟಿನಲ್ಲಿ ಮಹತ್ಕಾರ್ಯವಾಗಬೇಕು. ಯುವ ಜನಾಂಗ ಧರ್ಮದ ದಾರಿಯಲ್ಲಿ ನಡೆದರೆ ಈ ದೇಶದ ಅಮೂಲ್ಯ ಸಂಪತ್ತು ಅವರಾಗುತ್ತಾರೆ. ಯುವ ಶಕ್ತಿ ದೇಶದ ಶಕ್ತಿ ಅಷ್ಟೇ ಅಲ್ಲ, ಆಸ್ತಿಯಾಗಿದ್ದಾರೆ. ಇಂಥ ಸಮಾರಂಭಗಳ ಮೂಲಕ ಯುವ ಜನಾಂಗವನ್ನು ಸನ್ಮಾರ್ಗದಲ್ಲಿ ತರಲು ಸಾಧ್ಯವಾಗುವುದೆಂದರು.

ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಿಕಾರಿಪುರ ಕ್ಷೇತ್ರದ ಶಾಸಕ ಬಿ.ವೈ. ವಿಜಯೇಂದ್ರ ಮಾತನಾಡಿ, ಜನರ ಮನೆ ಮನಗಳಲ್ಲಿ ಅಡಗಿರುವ ದುರ್ಗುಣಗಳನ್ನು ನಾಶ ಮಾಡಿ, ಶಿಷ್ಟ ಸಂಸ್ಕೃತಿ ಬೆಳೆಸುವುದೇ ಗುರು ಪೀಠಗಳ ಧ್ಯೇಯವಾಗಿದೆ. ಧರ್ಮ ಮತ್ತು ಧರ್ಮಾಚರಣೆ ಮರೆತರೆ ಅಪಾಯ ತಪ್ಪಿದ್ದಲ್ಲ. ಶ್ರೀ ರಂಭಾಪುರಿ ಜಗದ್ಗುರುಗಳು ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಸದಾ ಶ್ರಮಿಸುತ್ತಿರುವುದು ನಮ್ಮೆಲ್ಲರ ಸೌಭಾಗ್ಯವೆಂದರು.

▶▶3ನೇ ಪುಟಕ್ಕೆ

**ಪ್ರಶಸ್ತಿ ಪ್ರದಾನ**

ಅ.ಭಾ.ವೀರಶೈವ ಶಿವಾಚಾರ್ಯ ಸಂಸ್ಥೆಯ ಗೌರವಾಧ್ಯಕ್ಷರಾದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳಿಗೆ 'ಶಿವಾಚಾರ್ಯ ರತ್ನ' ಪ್ರಶಸ್ತಿ ಪ್ರದಾನ ಮಾಡಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿದರು. ಮಳಲಿ ಸಂಸ್ಥಾನ ಮಠದ ಡಾ.ನಾಗಭೂಷಣ ಶಿವಾಚಾರ್ಯರು ಪ್ರಶಸ್ತಿ ವಾಚನ ಮಾಡಿದರು.

### ಗ್ರಾ.ಪಂ ಒಕ್ಕೂಟದ ಪ್ರತಿಭಟನೆಯ ಸ್ಥಳಕ್ಕೆ ಬಿ.ವೈ. ವಿಜಯೇಂದ್ರ ಭೇಟಿ

# ನಿಮ್ಮ ಧ್ವನಿಯಾಗಲು ಬಂದಿದ್ದೇನೆ

**■ವಿಜಯಸಾಕ್ಷಿ ಸುದ್ದಿ, ಗದಗ**




ಗ್ರಾಮ ಪಂಚಾಯತ್ ಒಕ್ಕೂಟದಿಂದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಗದಗ ನಗರದ ಜಿಲ್ಲಾಡಳಿತ ಭವನದ ಎದುರು ಅನಿರ್ದಿಷ್ಟಾವಧಿ ಹೋರಾಟ ನಡೆಸುತ್ತಿದ್ದು, ಪ್ರತಿಭಟನೆಯ ಸ್ಥಳಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಭೇಟಿ ನೀಡಿ, ಕೆಲಕಾಲ ಹೋರಾಟದಲ್ಲಿ ಭಾಗಿಯಾದರು.

ಪಿಡಿಒಗಳಿಗೆ ನೈತಿಕ ಸ್ಥೈರ್ಯ ತುಂಬಿದ ವಿಜಯೇಂದ್ರ, ಹೋರಾಟಗಾರರನ್ನು ಉದ್ದೇಶಿಸಿ ಮಾತನಾಡಿ, ನಾನು ಬಿಜೆಪಿ ರಾಜ್ಯಾಧ್ಯಕ್ಷನಾಗಿ ಇಲ್ಲಿಗೆ ಬಂದಿಲ್ಲ, ನಾನು ಶಾಸಕನಾಗಿ ಬಂದ್ದೇನೆ. ನಿಮ್ಮ ಧ್ವನಿಯಾಗಲು ಬಂದಿದ್ದೇನೆ. ರಾಜ್ಯ ಸರ್ಕಾರದ ದುರಹಂಕಾರದ ವರ್ತನೆಯನ್ನು ಯಾರೂ ಸಹಿಸಲು ಸಾಧ್ಯವಿಲ್ಲ. ನಿಮ್ಮ ಬೆಂಗಳೂರಿನಲ್ಲಿ ಯಾವುದೇ ಸಚಿವರು ಬಂದು ಮನವಿ ಸ್ವೀಕಾರ ಮಾಡಿಲ್ಲ ಎಂದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ನಿಮ್ಮ ಇಲಾಖೆ ಸಚಿವರಿಗೆ ಬೇರೆ ಬೇರೆ ಇಲಾಖೆಯಲ್ಲಿ ಮೂಗು ತೂರಿಸಲು ಸಮಯವಿದೆ, ಇಡೀ ಜಗತ್ತಿನ ರಾಜಕಾರಣದ ಬಗ್ಗೆ ಮಾತನಾಡುತ್ತಾರೆ. ಆದರೆ, ಅವರ ಇಲಾಖೆಯಲ್ಲಿ ಇಷ್ಟೊಂದು ದೊಡ್ಡ ಸಮಸ್ಯೆ ಇದ್ದರೂ, ಅವರ ಇಲಾಖೆಯ ಸಮಸ್ಯೆಯ ಮಾಹಿತಿ ಪಡೆದು ಬಗೆಹರಿಸುವ ಸೌಜನ್ಯ ತೋರಿಸಿಲ್ಲ ಎಂದು ಕಿಡಿಕಾರಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಪಿ.ಡಿ.ಓ ಸಂಘದ ಜಿಲ್ಲಾಧ್ಯಕ್ಷ ಕುಮಾರ್ ಪೂಜಾರ ಇದ್ದರು.

### ಕಪ್ಪತಗುಡ್ಡದಲ್ಲಿ ಗಣಿಗಾರಿಕೆಯ ಪ್ರಸ್ತಾವಗಳನ್ನು ಸಂಪೂರ್ಣವಾಗಿ ತಿರಸ್ಕರಿಸಿ: ತೋಂಟದ ಶ್ರೀಗಳು

# ಗಣಿಗಾರಿಕೆ ಜೀವಸಂಕುಲಕ್ಕೆ ಮಾರಕ

**■ವಿಜಯಸಾಕ್ಷಿ ಸುದ್ದಿ, ಗದಗ**

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಜರುಗಿದ ರಾಜ್ಯ ವನ್ಯಜೀವಿ ಮಂಡಳಿ ಸಭೆಯಲ್ಲಿ ವನ್ಯಜೀವಿಧಾಮ ಎಂದು ಘೋಷಿತವಾಗಿರುವ ಕಪ್ಪತಗುಡ್ಡದಿಂದ 10 ಕಿ.ಮೀ. ವ್ಯಾಪ್ತಿಯಲ್ಲಿ ಗಣಿಗಾರಿಕೆಗಾಗಿ ಬಂದ 28 ಪ್ರಸ್ತಾವಗಳನ್ನು ಮುಂದೂಡಿರುವುದು ಸ್ವಲ್ಪ ನೆಮ್ಮದಿಯನ್ನುಂಟುಮಾಡುವ ವಿಷಯವಾಗಿದ್ದರೂ ರಾಜ್ಯ ವನ್ಯಜೀವಿ ಮಂಡಳಿ ಆ ಪ್ರಸ್ತಾವನೆಗಳನ್ನು ಸಂಪೂರ್ಣವಾಗಿ ತಿರಸ್ಕರಿಸಬೇಕಾಗಿತ್ತು ಎಂದು ಡಂಬಳ-ಗದಗ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.



ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿದ ತೋಂಟದ ಶ್ರೀಗಳು, ಕಪ್ಪತಗುಡ್ಡದ ಸೂಕ್ಷ್ಮವಲಯ ವ್ಯಾಪ್ತಿಯನ್ನು ರಾಜ್ಯ ಸರಕಾರ 10 ಕಿಮೀ ಎಂದು ಸ್ಪಷ್ಟವಾಗಿ ಘೋಷಿಸುವುದಲ್ಲದೆ ಆ ಪ್ರದೇಶದಲ್ಲಿ ಯಾವುದೇ ಗಣಿಗಾರಿಕೆ ನಡೆಸದಂತೆ ಸ್ಪಷ್ಟ ಆದೇಶ ನೀಡಬೇಕು. ಈಗ ಬಂದಿದ್ದ 28 ಪ್ರಸ್ತಾವಗಳನ್ನು ಕೇವಲ ಮುಂದೂಡಲಾಗಿದೆ. ಇದರಿಂದ ಆತಂಕ ದೂರವಾಗದೇ ತೂಗುಗತ್ತಿ ಇನ್ನೂ ಮೇಲಿದೆ ಎಂಬಂತಾಗಿದೆ. ಕಪ್ಪತಗುಡ್ಡವು ಜೀವವೈವಿಧ್ಯ ಹಾಗೂ ಸಸ್ಯವೈವಿಧ್ಯಗಳ ಪ್ರದೇಶವಾಗಿದ್ದು, ಮಧ್ಯ ಕರ್ನಾಟಕದ ಸಹ್ಯಾದ್ರಿ ಎನಿಸಿದೆ. ಸಾವಿರಾರು ವನಸ್ಪತಿ ಸಸ್ಯಗಳ ಆಗರವಾಗಿರುವ ಈ ಪ್ರದೇಶದಲ್ಲಿ ಗಣಿಗಾರಿಕೆ ನಡೆಸುವುದು ಜೀವಸಂಕುಲಕ್ಕೆ ಮಾರಕವಾಗುತ್ತದೆ. ಗಣಿಗಾರಿಕೆಯ ಧೂಳಿನಿಂದ ಪರಿಸರ ಹಾನಿಯ ಜೊತೆಗೆ ಮಳೆಯ ಮೂಲವನ್ನೇ ನಾಶಗೊಳಿಸಿದಂತಾಗುತ್ತದೆ. ಆದ್ದರಿಂದ ಯಾವ ಕಾಲಕ್ಕೂ ಈ ಪ್ರದೇಶದಲ್ಲಿ ಗಣಿಗಾರಿಕೆಗೆ ಅವಕಾಶ ಕಲ್ಪಿಸಿಕೊಡಬಾರದು ಎಂದು ಶ್ರೀಗಳು ಆಗ್ರಹಿಸಿದ್ದಾರೆ.

> ಬೆಳಗಾವಿಯ ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ಮೇಲ್ವಿಚಾರಣೆಯ ಸಮಿತಿಯನ್ನು ರಚಿಸಿದ್ದು ಸ್ವಾಗತಾರ್ಹ. ಗದಗ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಇರುವ ಸಮಿತಿಯಲ್ಲಿ ಈ ಭಾಗದ ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿಗಳನ್ನು ಮತ್ತು ಪರಿಸರ ಉಳಿವಿಗಾಗಿ ನಿರಂತರ ಹೋರಾಟ ಮಾಡಿಕೊಂಡು ಬಂದಿರುವ ಪರಿಸರ ಪ್ರೇಮಿಗಳನ್ನು ಸದಸ್ಯರನ್ನಾಗಿ ಸೇರಿಸಬೇಕು ಎಂದು ತಿಳಿಸಿರುವ ಶ್ರೀಗಳು, ಕಪ್ಪತಗುಡ್ಡದ ಪ್ರದೇಶದಲ್ಲಿ ಯಾವುದೇ ರೀತಿಯ ಗಣಿಗಾರಿಕೆ ನಡೆಯದಂತೆ ನೋಡಿಕೊಳ್ಳುವ ಜವಾಬ್ದಾರಿ ನಮ್ಮೆಲ್ಲರದು. ಈ ದಿಶೆಯಲ್ಲಿ ಪ್ರತಿಯೊಬ್ಬರೂ ಆಸಕ್ತಿ ವಹಿಸಬೇಕೆಂದು ಸಾರ್ವಜನಿಕರಲ್ಲಿ ಕೋರಿದ್ದಾರೆ.

## ಸಂಪಾದಕೀಯ

# ಕರಾಳ ದಿನಾಚರಣೆಗೆ ಬೀಳಲಿ ಬ್ರೇಕ್

ಕನ್ನಡ ರಾಜ್ಯೋತ್ಸವವನ್ನು ಸಡಗರ ಸಂಭ್ರಮದಿಂದ ಆಚರಿಸುವ ಸಂದರ್ಭದಲ್ಲಿ ಮಹಾರಾಷ್ಟ್ರ ಏಕೀಕರಣ ಸಮಿತಿ ಕರಾಳ ದಿನಾಚರಣೆ ಮೂಲಕ ಕನ್ನಡ ರಾಜ್ಯೋತ್ಸವಕ್ಕೆ ಕಪ್ಪು ಚುಕ್ಕೆಯಾಗಿ ಪರಿಣಮಿಸಿದೆ.

ಕನ್ನಡ ರಾಜ್ಯೋತ್ಸವಕ್ಕೆ ಪರ್ಯಾಯವಾಗಿ ಮಹಾರಾಷ್ಟ್ರ ಏಕೀಕರಣ ಸಮಿತಿ ಅದೇ ದಿನ ಕರಾಳ ದಿನವನ್ನು ಆಚರಣೆ ಮಾಡುತ್ತದೆ. ಗಡಿನಾಡು ಬೆಳಗಾವಿಯಲ್ಲಿ ಒಂದೆಡೆ ಅದ್ದೂರಿ ಕನ್ನಡ ರಾಜ್ಯೋತ್ಸವ ನಡೆದಿದ್ದರೆ ಮತ್ತೊಂದೆಡೆ, ಮಹಾರಾಷ್ಟ್ರ ಏಕೀಕರಣ ಸಮಿತಿ ಕರಾಳ ದಿನವನ್ನು ಆಚರಿಸುತ್ತದೆ.

ಕನ್ನಡ ರಾಜ್ಯೋತ್ಸವ ದಿನವೇ ನಾಡ ವಿರೋಧಿ ಚಟುವಟಿಕೆಗೆ ಕಡಿವಾಣ ಹಾಕಬೇಕು ಎಂದು ಕನ್ನಡ ಸಂಘಟನೆಗಳು ಪ್ರತಿ ವರ್ಷ ಒತ್ತಾಯಿಸುತ್ತಲೆ ಬಂದಿವೆ. ಪ್ರತಿ ವರ್ಷ ನಡೆಯುವ ಕನ್ನಡ ರಾಜ್ಯೋತ್ಸವ ಪೂರ್ವಭಾವಿ ಸಭೆಯಲ್ಲಿ ಮಹಾರಾಷ್ಟ್ರ ಏಕೀಕರಣ ಸಮಿತಿಯ ಕರಾಳ ದಿನಾಚರಣೆ ಬಗ್ಗೆ ಚರ್ಚೆ ನಡೆಯುತ್ತಲೇ ಇರುತ್ತದೆ.

ಬೆಳಗಾವಿ ಜಿಲ್ಲಾಧಿಕಾರಿಗಳು ಮತ್ತು ಅಲ್ಲಿನ ಪೊಲೀಸ್ ವರಿಷ್ಠಾಧಿಕಾರಿಗಳು, ಕರಾಳ ದಿನಾಚರಣೆಗೆ ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ ಎಂದು ಹೇಳಿಕೊಳ್ಳುತ್ತಾರೆ. ಆದರೆ ಪ್ರತಿ ವರ್ಷ ಒಂದಿಲ್ಲೊಂದು ರೀತಿಯಲ್ಲಿ ಕರಾಳ ದಿನಾಚರಣೆ ನಡೆಯುತ್ತಲೇ ಇದೆ.

ಕರಾಳ ದಿನಾಚರಣೆ ಅಧಿಕಾರಿಗಳ ಈ ರೀತಿಯ ಹೇಳಿಕೆಗಳಿಂದ ತಡೆಯಲು ಸಾಧ್ಯವಿಲ್ಲ. ಕರಾಳ ದಿನಾಚರಣೆ ತಡೆಗೆ ಪ್ರಬಲ ರಾಜಕೀಯ ಇಚ್ಛಾಶಕ್ತಿ ಅಗತ್ಯವಾಗಿದೆ. ಆದರೆ ನಮ್ಮ ನಾಡಿನ ಜನಪ್ರತಿನಿಧಿಗಳು, ಮರಾಠಿಗರ ಬೆಂಬಲವಿಲ್ಲದೆ ವಿಧಾನಸಭೆ ಪ್ರವೇಶಿಸಲು ಸಾಧ್ಯವಿಲ್ಲ. ಆ ಕಾರಣಕ್ಕಾಗಿ ರಾಜ್ಯದ ಜನ ಪ್ರತಿನಿಧಿಗಳು ಮಹಾರಾಷ್ಟ್ರ ಏಕೀಕರಣದ ಕರಾಳ ದಿನವನ್ನು ಎಂದಿಗೂ ಪ್ರಬಲವಾಗಿ ವಿರೋಧಿಸುವುದಿಲ್ಲ.

ಮಹಾರಾಷ್ಟ್ರ ಏಕೀಕರಣ ಸಮಿತಿಗೂ ಈ ಸತ್ಯ ಗೊತ್ತಿರುವ ಕಾರಣಕ್ಕೆ, ಕನ್ನಡ ರಾಜ್ಯೋತ್ಸವ ದಿನವೇ ಕರಾಳ ದಿನವನ್ನು ಆಚರಿಸುತ್ತದೆ. ಅಂದು ಮರಾಠಿಗರನ್ನ ಒಗ್ಗೂಡಿಸುವ ಜೊತೆಗೆ, ಮಹಾರಾಷ್ಟ್ರ ಸರ್ಕಾರದ ಜನಪ್ರತಿನಿಧಿಗಳನ್ನು ಆಹ್ವಾನಿಸಿ ಕರ್ನಾಟಕ ರಾಜ್ಯಕ್ಕೆ ಸೆಡ್ಡು ಹೊಡೆಯುವ ಪ್ರಯತ್ನ ಮಾಡುತ್ತದೆ.

ಇಷ್ಟಾದರೂ ನಾಡದ್ರೋಹಿ ಮಹಾರಾಷ್ಟ್ರ ಏಕೀಕರಣ ಸಮಿತಿ ವಿರುದ್ಧ ಕರ್ನಾಟಕ ಯಾವುದೇ ಕಠಿಣ ಕ್ರಮಗಳನ್ನು ಕೈಗೊಂಡಿಲ್ಲ. ಗಡಿ ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆ ಹಾಳಾಗಲು ಎಂಇಎಸ್ ಕಾರಣವಾಗಿದ್ದರೂ, ಎಂಇಎಸ್ ವಿರುದ್ಧ ಯಾವುದೇ ಕಾನೂನಾತ್ಮಕ ಹೋರಾಟಗಳನ್ನು ಮಾಡಿಲ್ಲ. ನಾಡು ನುಡಿಯ ವಿಚಾರದಲ್ಲಿ ಇನ್ನಾದರೂ ರಾಜ್ಯ ಸರ್ಕಾರ ಗಂಭೀರ ಕ್ರಮಗಳನ್ನ ಕೈಗೊಳ್ಳಲಿ ಎನ್ನುವುದು ಕನ್ನಡಿಗರ ಆಶಯ.

---

### 'ಲಿಂಗರಾಜ ನಗರ ದಸರಾ-2024'ರ ಉತ್ಸವದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಹಬ್ಬಗಳ ಆಚರಣೆಯಿಂದ ಮನೋವಿಕಾಸ

**■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ನಮ್ಮ ಭಾರತೀಯ ಹಬ್ಬಗಳ ಆಚರಣೆಗಳಲ್ಲಿ ವ್ಯಕ್ತಿಯ ಮನೋವಿಕಾಸದ ಉದ್ದೇಶ ಅಡಗಿದೆ. ಅವುಗಳ ಸಮರ್ಪಕ ಆಚರಣೆಯಲ್ಲಿ ಮಹಿಳೆಯರ ಪಾತ್ರ ಮಹತ್ವದ್ದಾಗಿದೆ ಎಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಹೇಳಿದರು.

ಇಲ್ಲಿನ ಲಿಂಗರಾಜ ನಗರ ದಸರಾ-2024ರ ಉತ್ಸವದಲ್ಲಿ ಮಂಗಳವಾರ ಸಂಜೆ ದಾಂಡಿಯಾಗೆ ಚಾಲನೆ ನೀಡುವ ಮುನ್ನ ಮಾತನಾಡಿದ ಜಿಲ್ಲಾಧಿಕಾರಿಗಳು, ಶಿವರಾತ್ರಿ ಒಂದು ದಿನದ ಹಬ್ಬ. ಶಿವನಿಂದ ಶುರುವಾಗಿ ನವರಾತ್ರಿಯ ಒಂಬತ್ತು ದಿನಗಳ ಶಕ್ತಿ ತುಂಬುವ ಹಬ್ಬದ ಆಚರಣೆ ನಮ್ಮದಾಗಿದೆ. ಮಹಿಳೆಯರು ಝೀ-ರೋ ಅಲ್ಲ. ಅವರು ಕೌಟುಂಬಿಕ ವ್ಯವಸ್ಥೆಯ ಜೀವಾಳವಾಗಿದ್ದಾರೆ. ವಿಜಯದಶಮಿಯ ಉದ್ದೇಶ ವಿವಿಧ ಅವತಾರಗಳಿಗೆ ಪೂಜೆ ಸಲ್ಲಿಸುವ ಮೂಲಕ ಕುಟುಂಬದಲ್ಲಿ ಸಮೃದ್ಧಿ-ಶಾಂತಿ ನೆಲೆಸುವಂತೆ ಮಾಡುವುದಾಗಿದೆ ಎಂದರು.

ದಾಂಡಿಯಾದಂತಹ ಶಾರೀರಿಕ ಚಟುವಟಿಕೆಗಳ ಉದ್ದೇಶ ಕೇವಲ ಮೋಜು ಮಾಡುವುದಲ್ಲ. ಆಟ ಆಡುತ್ತ ದೇವಿಗೆ ಭಕ್ತಿ ಸಮರ್ಪಿಸುವ, ಆ ಮೂಲಕ ಮಾನಸಿಕ ಸ್ಥೈರ್ಯವನ್ನು ಹೆಚ್ಚಿಸಿಕೊಳ್ಳುವ ಘನ ಉದ್ದೇಶ ಇಂತಹ ಆಚರಣೆಗಳ ಹಿಂದೆ ಅಡಗಿದೆ. ನಾವೆಲ್ಲ ದೇವಿಯ ಮುಂದೆ ಮಕ್ಕಳಾಗಿದ್ದು, ಆ ತಾಯಿಯ ಮೂಲಕ ಸೃಷ್ಟಿ-ಸ್ಥಿತಿ-ಲಯಗಳ ಸಂಕೇತವಾದ ಬ್ರಹ್ಮ-ವಿಷ್ಣು-ಮಹೇಶ್ವರರನ್ನು ಅರ್ಥೈಸಿಕೊಳ್ಳಬೇಕಿದೆ. ಒಳ್ಳೆಯ ರೀತಿಯಲ್ಲಿ ಬದುಕಲು ವಿವೇಕ ಬೇಕು, ಆ ವಿವೇಕದ ಸಂಕೇತವಾಗಿರುವ ಸರಸ್ವತಿಯ ಪೂಜೆಯೂ ದಸರಾದ ಕೊನೆಯ ಮೂರು ದಿನಗಳಲ್ಲಿ ನಡೆಯುತ್ತದೆ ಎಂದು ವಿಶ್ಲೇಷಿಸಿದರು.



ಐ.ಎ.ಎಸ್. ತಯಾರಿಗೆ ಓದಿರುವ ಪುಸ್ತಕಗಳಿಗಿಂತ ಐ.ಎ.ಎಸ್. ನಂತರ ಹೆಚ್ಚಿನ ಪುಸ್ತಕಗಳನ್ನು ಓದುತ್ತಿರುವುದಾಗಿ ಹೇಳಿದ ಜಿಲ್ಲಾಧಿಕಾರಿ ದಿವ್ಯ ಪ್ರಭು, ಮಕ್ಕಳ ಮೇಲೆ ತಮ್ಮ ಯಾವುದೇ ರೀತಿಯ ಕನಸುಗಳನ್ನು, ಒತ್ತಡಗಳನ್ನು ಹೇರಬಾರದು ಎಂದು ಪಾಲಕರಿಗೆ ಮನವಿ ಮಾಡಿದರು. ಜ್ಞಾನಕ್ಕೆ ಮಿತಿ ಇಲ್ಲ, ಕೊನೆ ಇಲ್ಲ. ಮಕ್ಕಳಿ ಪಠ್ಯ-ಪುಸ್ತಕಗಳ ಜೊತೆಗೆ ಇತರ ಪುಸ್ತಕಗಳನ್ನೂ ಓದುವಂತೆ ಪ್ರೋತ್ಸಾಹಿಸಬೇಕು ಎಂದು ಪಾಲಕರಿಗೆ ಕಿವಿಮಾತು ಹೇಳಿದರು.

ಶಾಸಕ ಮಹೇಶ ಟೆಂಗಿನಕಾಯಿ ಮಾತನಾಡಿ, ಜಗತ್ತಿನಲ್ಲಿ ಭಾರತದ ಸಂಸ್ಕೃತಿ ವಿಶೇಷವಾಗಿದೆ. ಇತ್ತೀಚಿನ ವರ್ಷಗಳಲ್ಲಿ ಭಾರತ ಮಾತೆ ಜಗನ್ಮಾತೆ ಆಗುತ್ತಿದ್ದಾಳೆ ಎಂದರು.

ಇದೇ ಸಂದರ್ಭದಲ್ಲಿ ಅತ್ಯುತ್ತಮ ಜಿಲ್ಲಾಧಿಕಾರಿ ಪ್ರಶಸ್ತಿ ಪಡೆದ ದಿವ್ಯಪ್ರಭು ಜಿ.ಆರ್.ಜೆ. ಅವರನ್ನು ಲಿಂಗರಾಜ ನಗರದ ಮಹಿಳೆಯರು ಉಡಿ ತುಂಬಿ, ಸನ್ಮಾನಿಸಿದರು. ಕಾರ್ಯಕ್ರಮವನ್ನು ಸಂಗಮೇಶ ಮೆಣಸಿನಕಾಯಿ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಕಾರ್ಪೊರೇಟರ್‌ಗಳಾದ ಉಮೇಶಗೌಡ ಕೌಜಗೇರಿ, ರಾಜಣ್ಣ ಕೊರವಿ, ದಸರಾ ಸಮಿತಿಯ ಪದಾಧಿಕಾರಿಳಾದ ಜಿ.ವಿ. ವಳಸಂಗ, ರಾಜಣ್ಣ ಬತ್ತಿ, ಸಾಹೇಬಗೌಡ ಪೊಲೀಸಪಾಟೀಲ್, ಎಸ್.ಎಂ. ತೊಗರ್ಸಿ, ಗಿರಿಜಾ ಸಂಗೊಳ್ಳಿ, ನಿರ್ಮಲಾ ಝಳಕಿ ಸೇರಿದಂತೆ ಬಡಾವಣೆಯ ಸಾವಿರಾರು ನಾಗರಿಕರು ಉಪಸ್ಥಿತರಿದ್ದರು.

---

### ತಂದೆಯನ್ನು ಕೊಂದವನ ಮೇಲೆ ಸೇಡು ತೀರಿಸಿಕೊಳ್ಳುವ ಅಸುರನ ಕಥೆ

# ಸೆನ್ಸಾರ್‌ಗೆ ಹೊರಟ 'ತಾರಕೇಶ್ವರ'

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಜಿ.ಆರ್. ಫಿಲಂಸ್ ಬೆಂಗಳೂರು ಲಾಂಛನದಲ್ಲಿ ಭಕ್ತಿ ಪ್ರಧಾನ 'ತಾರಕೇಶ್ವರ' ಕನ್ನಡ ಚಲನಚಿತ್ರ ಪೋಸ್ಟ್ ಪ್ರೊಡಕ್ಷನ್ ಕಾರ್ಯ ಮುಗಿಸಿದ್ದು, ಸಧ್ಯದಲ್ಲೇ ಸೆನ್ಸಾರ್‌ಗೆ ಹೋಗಲು ಸಿದ್ಧವಾಗಿದೆ.

ಈಗಾಗಲೇ ಚಲನಚಿತ್ರರಂಗದಲ್ಲಿ ವಿವಿಧ ಪಾತ್ರಗಳ ಮೂಲಕ ತಮ್ಮದೇ ಛಾಪು ಮೂಡಿಸಿರುವ ಗಣೇಶ್‌ರಾವ್ ಕೇಸರಕರ ಅವರ 333ನೇ ಚಿತ್ರ ಇದಾಗಿದೆ. ಸಿನಿಮಾಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ, ಸಾಹಿತ್ಯ ಬರೆದು ನಿರ್ದೇಶನ ಮಾಡಿರುವ ಪುರುಷೋತ್ತಮ್ ಅವರು ಹೇಳುವಂತೆ, ಈ ಹಿಂದೆ 'ಸಿದ್ಧರಾಮೇಶ್ವರ' ಚಿತ್ರದಲ್ಲಿ ಗಣೇಶ್‌ರಾವ್ ಶಿವನಾಗಿ ನಟಿಸುತ್ತಿರುವ ಸಂದರ್ಭದಲ್ಲೇ 'ತಾರಕೇಶ್ವರ' ಕುರಿತಂತೆ ಒನ್ ಲೈನ್ ಎಳೆ ಚರ್ಚಿಸಲಾಗಿತ್ತು. ಶಿವಪುರಾಣದ ಕಥೆಯಲ್ಲಿ ತಾರಕಾಸುರ ಅಸುರ ಆದರೂ ಕೂಡ, ತಂದೆಯನ್ನು ಕೊಂದವನ ಮೇಲೆ ಸೇಡು ತೀರಿಸಿಕೊಳ್ಳಲು ತಪಸ್ಸು ಮಾಡಿ ತನಗೆ ಸಾವು ಬರಬಾರದೆಂದು ಬ್ರಹ್ಮನಿಂದ ವರ ಪಡೆದುಕೊಳ್ಳುತ್ತಾನೆ. ಮುಂದೆ ಯಾವ ರೀತಿ ಹೋರಾಟ ಮಾಡುತ್ತಾನೆಂದು ಕುತೂಹಲದ ಸನ್ನಿವೇಶಗಳೊಂದಿಗೆ ಚಿತ್ರದಲ್ಲಿ ತೋರಿಸಲಾಗಿದೆ. ಗಣೇಶ್‌ರಾವ್ ಕೇಸರಕರ್ ಪುತ್ರ ಪ್ರಜ್ವಲ್ ಕೇಸರಕರ್ ಇಂದ್ರನಾಗಿ ಕಾಣಿಸಿಕೊಂಡಿದ್ದಾರೆ. ಬೆಂಗಳೂರು, ಶ್ರೀರಂಗಪಟ್ಟಣ, ಮೈಸೂರು ಮೊದಲಾದ ಕಡೆ ಚಿತ್ರೀಕರಣ ನಡೆಸಲಾಗಿದೆ ಎಂದರು.



ನಾನು 'ಸಿದ್ಧರಾಮೇಶ್ವರ' ಚಿತ್ರದಲ್ಲಿ ಈಶ್ವರ ಪಾತ್ರ ಮಾಡಿದಾಗ ಎಲ್ಲರೂ ಇಷ್ಟಪಟ್ಟರು. ಮುಂದೆ 'ಗಂಗೆಗೌರಿ' ಆರಂಭಿಸಿ ಎಡಿಟಿಂಗ್ ಸಮಯದಲ್ಲಿ 'ತಾರಕೇಶ್ವರ' ಚಿತ್ರ ಮಾಡುವ ಬಗ್ಗೆ ಪ್ರಸ್ತಾಪ ಬಂತು. ಆಗ ಒಂದಷ್ಟು ಆಪ್ತರು ಹಣ ಹೂಡಲು ಮುಂದೆ ಬಂದರು. ಇವರೆಲ್ಲರ ಸಹಕಾರದಿಂದಲೇ ತಾರಕಾಸುರನಾಗಿ ಅಭಿನಯಿಸಲು ಸಾಧ್ಯವಾಯಿತು ಎಂದು ಚಿತ್ರದ ನಿರ್ಮಾಪಕರೂ ಆದ ಗಣೇಶ್‌ರಾವ್ ಕೇಸರಕರ್ ಸಂತಸ ಹಂಚಿಕೊಂಡರು.

ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ-ಮುತ್ತುರಾಜ್, ಸಂಗೀತ-ರಾಜ್‌ಭಾಸ್ಕರ್, ಸಂಕಲನ-ಅನಿಲ್ ಕುಮಾರ್, ನೃತ್ಯ-ಕಪಿಲ್, ವಸ್ತ್ರಾಲಂಕಾರ-ವೀರೇಂದ್ರ ಬೆಳ್ಳಿಚುಕ್ಕಿ, ವರ್ಣಾಲಂಕಾರ-ಅಭಿನಂದನ, ಪತ್ರಿಕಾ ಸಂಪರ್ಕ ಚಂದ್ರಶೇಖರ, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ, ಸಂಭಾಷಣೆ ಜಿಮ್ ಶಿವು, ಸಂಕಲನ-ಆರ್.ಅನಿಲ್ ಕುಮಾರ್, ಸಹ ನಿರ್ದೇಶನ-ಜಿಮ್ ಶಿವು, ಶ್ರೀಕರ ಮಂಜು, ಸಹ ನಿರ್ಮಾಪಕರು-ತುಳಜಾಬಾಯಿ, ರೂಪ ಎಸ್.ದೊಡ್ಡನಿ, ಡಾ. ಸುಮಿತ ಪ್ರವೀಣ್, ಬಸವರಾಜ್ ದೇಸಾಯಿ, ನಿರ್ಮಾಣ ನಿರ್ವಹಣೆ-ಹೇಮಂತ್ ಬಾಬು, ನಿರ್ಮಾಪಕರು ಗಣೇಶ್ ರಾವ್ ಕೇಸರಕರ ಆಗಿದ್ದಾರೆ.

ಪಾರ್ವತಿಯಾಗಿ ನಾಯಕಿ ರೂಪಾಲಿ ಹಾಡಿನಲ್ಲಿ ಅದ್ಭುತ ಅಭಿನಯ ನೀಡಿದ್ದಾರೆ. ಬಾಲನಟಿ ಋತುಸ್ಪರ್ಶ, ಸುಮಿತ ಪ್ರವೀಣ್, ಅನ್ನಪೂರ್ಣ, ರತಿಮನ್ಮಥರಾಗಿ ವಿಕ್ರಂಸೂರಿ-ನಮಿತಾರಾವ್, ಶಂಕರಭಟ್, ಶ್ರೀವಿಷ್ಣು, ಜಿಮ್ ಶಿವು, ಎನ್.ಟಿ. ರಾಮಸ್ವಾಮಿ, ಗುರುರಾಜ್, ಹೆಜ್ಜಾಜಿ ಮಹಾದೇವ, ಬಸವರಾಜ ದೇಸಾಯಿ, ವೀರೇಂದ್ರ ಬೆಳ್ಳಿಚುಕ್ಕಿ, ಮಧು ಕಾರ್ತಿಕ್, ಗೀತಾ, ರಾಜೇಶ್ವರಿ ಪಾಂಡೆ, ರಕ್ಷಾಗೌಡ, ರಂಜಿತ, ಶ್ರೀರಾಮ್, ರೂಪ ಮುಂತಾದವರು ಅಭಿನಯಿಸಿದ್ದಾರೆ.

ಶೀಘ್ರದಲ್ಲೇ ಚಿತ್ರವನ್ನು ರಾಜ್ಯಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆ ಮಾಡುವದಾಗಿ ನಿರ್ಮಾಪಕ ಗಣೇಶರಾವ್ ಮತ್ತು ನಿರ್ದೇಶಕ ಬಿ.ಎ. ಪುರುಷೋತ್ತಮ ಓಂಕಾರಸ್ವಾಮಿ ಹೇಳಿದ್ದಾರೆ.

---

# ಉಡಿ ತುಂಬುವ ಕಾರ್ಯಕ್ರಮ ಇಂದು

**■ ವಿಜಯಸಾಕ್ಷಿ ಸುದ್ದಿ, ಗದಗ**

ಬೆಟಗೇರಿ ಎಸ್.ಎಸ್.ಕೆ. ಜಗದಂಬಾ ದೇವಸ್ಥಾನದಲ್ಲಿ ಎಸ್.ಎಸ್.ಕೆ. ಸಮಾಜ ಪಂಚ ಕಮಿಟಿ ಮತ್ತು ತರುಣ ಸಂಘ, ಮಹಿಳಾ ಮಂಡಳ ಇವರ ಸಹಯೋಗದಲ್ಲಿ ದಸರಾ ಹಬ್ಬದ ನಿಮಿತ್ತ ಅ.10 ರಂದು ಬೆಳಿಗ್ಗೆ ಕಾಕಡರಾತಿ, ಭಜನೆಯೊಂದಿಗೆ ಸುಮಂಗಲಿಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಲಿದೆ.

ಲೋಬೋಸಾ ಕುಟುಂಬದ ವರಿಂದ ಮಂಜುನಾಥ ಎನ್.ಕಬಾಡಿ ಮತ್ತು ಮಾಯಾ ಕಬಾಡಿ, ಲೋಬೋಸಾ ಎನ್.ಕಬಾಡಿ ಮತ್ತು ಧನಲಕ್ಷ್ಮಿ ಲೋಬೋಸಾ ಕಬಾಡಿ, ನಾಗರಾಜ ಎನ್. ಕಬಾಡಿ ಮತ್ತು ಸಂಗೀತಾ ನಾಗರಾಜ ಕಬಾಡಿ ದಂಪತಿಗಳಿಂದ ಎಸ್.ಎಸ್.ಕೆ. ಸಮಾಜ ಮತ್ತು ಇತರೇ ಸಮಾಜದ ಸುಮಂಗಲಿಯರಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯಲಿದೆ.

ದಿ. ನಾರಾಯಣಸಾ ಲೋಬೋಸಾ ಕಬಾಡಿ ಹಾಗೂ ದಿ. ಲಕ್ಷ್ಮೀಬಾಯಿ ನಾರಾಯಣಸಾ ಕಬಾಡಿ ಇವರು ಕಳೆದ 30 ವರ್ಷಗಳಿಂದ ಜಗದಂಬಾ ದೇವಸ್ಥಾನದಲ್ಲಿ ತಮ್ಮ ಧಾರ್ಮಿಕ ಸೇವೆಯನ್ನು ಸಲ್ಲಿಸುತ್ತಾ ಬಂದಿದ್ದು, ಅವರು ನಡೆದುಕೊಂಡು ಬರುತ್ತಿರುವ ಧಾರ್ಮಿಕ ಪ್ರವೃತ್ತಿಯನ್ನು ಅವರು ಕುಟುಂಬ ವರ್ಗದವರು ಮುಂದುವರೆಸಿಕೊಂಡು ಬರುತ್ತಿದ್ದಾರೆ.

ಕಾರ್ಯಕ್ರಮದಲ್ಲಿ ಎಸ್.ಎಸ್.ಕೆ. ಸಮಾಜ ಸೇರಿದಂತೆ ಇತರೆ ಸಮಾಜದ ಸುಮಂಗಲಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜಗದಂಬಾ ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ಪತ್ರಿಕಾ ಪ್ರಕಟಣೆಯ ಮೂಲಕ ಲೋಬೋಸಾ ಮತ್ತು ಕಬಾಡಿ ಕುಟುಂಬದವರು ವಿನಂತಿಸಿದ್ದಾರೆ.



---

# ಸಂಸ್ಥೆಯು ಕಲಾವಿದರಿಗೆ ನೆಲೆಯಾಗಲಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಶಂಕರ ಶಿವಾಚಾರ್ಯ ಕುರುಹಿನಶೆಟ್ಟಿ ಸಮುದಾಯ ಭವನ ಬೆಟಗೇರಿ-ಗದಗದಲ್ಲಿ ನೂತನವಾಗಿ ರಾಣಿ ಚನ್ನಮ್ಮಾಜಿ ಸಾಂಸ್ಕೃತಿಕ ಕಲಾ ಸಂಸ್ಥೆಯ ಉದ್ಘಾಟನಾ ಸಮಾರಂಭವನ್ನು ಬೃಹನ್ಮಠದ ಶ್ರೀ ಮ.ಘ.ಚ. ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಗಳು, ರಾಣಿ ಚನ್ನಮ್ಮಾಜಿ ಸಾಂಸ್ಕೃತಿಕ ಕಲಾ ಸಂಸ್ಥೆಯು ಹೆಮ್ಮರವಾಗಿ ಬೆಳೆಯಲಿ. ನೂರಾರು ಕಲಾವಿದರಿಗೆ ನೆಲೆಯಾಗಿ, ದಾರಿ ದೀಪವಾಗಲಿ, ಮುಗಿಲೆತ್ತರಕ್ಕೆ ಬೆಳೆಯಲಿ ಎಂದು ಶುಭ ಹಾರೈಸಿದರು.





ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಬೃಹನ್ಮಠದ ಶ್ರೀ ಮ.ಘ.ಚ. ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಕಾಯಕ ಫೌಂಡೇಶನ್ ಹಾಗೂ ಸಿಂಚನ ಗ್ರಾಮೀಣ ಹಾಗೂ ನಗರಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷ ಶಿವರಾಜಗೌಡ ಮ.ಶಿವನಗೌಡರ, ಅತಿಥಿಗಳಾಗಿ ಉಸಿರು ಫೌಂಡೇಶನ್‌ನ ರೇಣುಕಾ ಶ.ಪಾಟೀಲ ಪಾಲ್ಗೊಂಡಿದ್ದರು.

ಕಲಾ ಸಂಸ್ಥೆಯ ಕಲಾವಿದರಾದ ಜಾವೀದ ಅಸುಂಡಿ ಕಾರ್ಯಕ್ರಮ ನಿರೂಪಿಸಿದರು. ಶಿವಕುಮಾರ ಬನಹಟ್ಟಿ ವಂದಿಸಿದರು.

---

### ರಾಜ್ಯ ಮಟ್ಟದ 11ನೇ ಸಾಂಸ್ಕೃತಿಕ ಸಮ್ಮೇಳನದಲ್ಲಿ ಬನ್ನೂರು ಕೆ.ರಾಜು ಅಭಿಪ್ರಾಯ

# ವಾಟಾಳ ನಾಗರಾಜ್ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಲಿ

**■ ವಿಜಯಸಾಕ್ಷಿ ಸುದ್ದಿ, ಮೈಸೂರು**

ಮಂಡ್ಯದಲ್ಲಿ ಹಮ್ಮಿಕೊಂಡಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಈ ಬಾರಿ ಕನ್ನಡದ ಹೋರಾಟಗಾರ ವಾಟಾಳ್ ನಾಗರಾಜ್ ಅವರನ್ನು ಆಯ್ಕೆ ಮಾಡಲಿ ಎಂದು ಮೈಸೂರಿನ ಹಿರಿಯ ಪತ್ರಕರ್ತ ಹಾಗೂ ಸಾಹಿತಿ ಬನ್ನೂರು ಕೆ.ರಾಜು ಅಭಿಪ್ರಾಯಪಟ್ಟರು.

ಅವರು ಮೈಸೂರಿನ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್‌ನ ಕನ್ನಡ ಭವನದಲ್ಲಿ ಮೈಸೂರು ಜಿಲ್ಲಾ ಕಸಾಪ, ಕೊಪ್ಪಳದ ಕನ್ನಡ ಸಾಹಿತ್ಯ ಸಂಸ್ಕೃತಿ ಅಭಿವೃದ್ಧಿ ಟ್ರಸ್ಟ್ ಹಾಗೂ ಜಸ್ಟ್ ಮಾತ್ ಮಾತಲ್ಲಿ ಸ್ನೇಹಕೂಟ್ಗಳ ಸಹಯೋಗದಲ್ಲಿ ರಾಜ್ಯ ಮಟ್ಟದ 11ನೇ ಸಾಂಸ್ಕೃತಿಕ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ಕನ್ನಡ ನಾಡು ಹಲವು ಹತ್ತಾರು ಬಿಕ್ಕಟ್ಟುಗಳನ್ನು ಎದುರಿಸುತ್ತಿದೆ. ನದಿ ನೀರು ಹಂಚಿಕೆ, ಗಡಿನಾಡು ಸಮಸ್ಯೆ, ಭಾಷಾ ಸಮಸ್ಯೆ ಹೀಗೆ ಹತ್ತಾರು ಜ್ವಲಂತ ಸಮಸ್ಯೆಗಳ ನಡುವೆ ಸಾಹಿತ್ಯೇತರ ವ್ಯಕ್ತಿ, ಹಿರಿಯ ಜೀವಿ ವಾಟಾಳ್ ನಾಗರಾಜ್ ಅವರನ್ನು ಆಯ್ಕೆ ಮಾಡಿದರೆ ಸೂಕ್ತ ಎಂದು ಹೇಳಿದರು.



ಸಾಹಿತಿ ಎಂ.ಬಿ. ಜಯಶಂಕರ್ ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸಿ ಮಾತನಾಡಿ, ನಾಡು-ನುಡಿ, ಪರಂಪರೆಗೆ ಹೆಸರಾದ ಮೈಸೂರಿನಲ್ಲಿ ಸಾಂಸ್ಕೃತಿಕ ಸಮ್ಮೇಳನ ಆಯೋಜಿಸುವ ಮೂಲಕ ಸಾಂಸ್ಕೃತಿಕ ಪ್ರತಿಭೆಗಳಿಗೆ ಉತ್ತಮ ವೇದಿಕೆ ಒದಗಿಸಿದಂತಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಮೈಸೂರು ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಹಿರಿಯ ಪತ್ರಕರ್ತ ರಮೇಶ್ ಸುರ್ವೆ ಮಾತನಾಡಿದರು. ಚುಸಾಪ ಸಂಸ್ಥಾಪಕ ಅಧ್ಯಕ್ಷ ಡಾ. ಎಂ.ಜೆ.ಆರ್ ಅರಸು ವಿಚಾರ ಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದರು. ವಿವಿಧ ಸಾಧಕರಿಗೆ ಹಿರಿಯ ಸಮಾಜ ಸೇವಕ ಎಂ.ಬಿ. ಅಳವಂಡಿ ಪ್ರಶಸ್ತಿ ಪ್ರದಾನ ಮಾಡಿದರು. ಡಾ. ಟಿ.ತ್ಯಾಗರಾಜು, ಡಾ. ಜಂಬಣ್ಣ ಅಂಗಡಿ ಅತಿಥಿಗಳಾಗಿ ಆಗಮಿಸಿದ್ದರು. ಸಮ್ಮೇಳನ ಸಂಚಾಲಕ ರುದ್ರಪ್ಪ ಭಂಡಾರಿ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಸಂಜೆ ನಡೆದ ಸಮಾರೋಪ ಸಮಾರಂಭದಲ್ಲಿ ಸಾಹಿತಿ ಪದ್ಮನಾಭ ಸಮಾರೋಪ ನುಡಿ ಹೇಳಿದರು. ಸಾಹಿತಿ ಸತೀಶ್ ಜವರೇಗೌಡ ಆಶಯ ನುಡಿ ಹೇಳಿದರು. ಸಾಹಿತಿ ಶಶಿಕುಮಾರ್ ಎಂ.ಎ., ಯೋಗಗುರು ನಾಗರತ್ನ ಹಿರೇಮಠ ಅತಿಥಿಗಳಾಗಿ ಭಾಗವಹಿಸಿದ್ದರು.

---

# ತಿಮ್ಮಾಪುರಕ್ಕೆ ಭೇಟಿ ನೀಡಿದ ಕೆ.ಎಸ್. ಈಶ್ವರಪ್ಪ



**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿಯ ಸಮೀಪದ ತಿಮ್ಮಾಪೂರ ಗ್ರಾಮಕ್ಕೆ ಮಾಜಿ ಉಪಮುಖ್ಯಮಂತ್ರಿ, ಹಿಂದುಳಿದ ವರ್ಗಗಳ ನಾಯಕ ರಾಯಣ್ಣ ಬ್ರಿಗೇಡ್ ರುವಾರಿ ಕೆ.ಎಸ್. ಈಶ್ವರಪ್ಪ ಮಂಗಳವಾರ ತಿಮ್ಮಾಪೂರ ಗ್ರಾಮಕ್ಕೆ ಪ್ರಥಮ ಬಾರಿಗೆ ಭೇಟಿ ನೀಡಿದರು.

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಮೂರ್ತಿಗೆ ಪೂಜೆ ಸಲ್ಲಿಸಿದರು. ಕಿರಣ್ ಡಿಜೆ ಬಾಯ್ಸ್ ಯುವಕರು ಕೆ.ಎಸ್. ಈಶ್ವರಪ್ಪನವರಿಗೆ ಕರಿ ಕಂಬಳಿ ಹಾಗೂ ಕುರಿ ಮರಿಯನ್ನು ಕೊಟ್ಟು ಸನ್ಮಾನಿಸಿದರು. ನಂತರ ಗ್ರಾಮದಲ್ಲಿ ಪಾದಯಾತ್ರೆಯ ಮೂಲಕ ತೆರಳಿ ಶ್ರೀ ಮಾರುತೇಶ್ವರನ ದರ್ಶನ ಪಡೆದು ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥನೆ ಸಲ್ಲಿಸಿದರು. ದೇವಸ್ಥಾನದ ಆವರಣದಲ್ಲಿ ಶ್ರೀ ರೇಣುಕಾ ಎಲ್ಲಮ್ಮ ದೇವಿ ಟ್ರಸ್ಟ್ ಕಮಿಟಿಯ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕಿರಣ ಗುಡ್ಲಾನೂರ, ಚನ್ನಮ್ಮ ಹುಳುಕಣ್ಣವರ ಮಹಾಂತೇಶ ಗಂಗರಾತ್ರಿ, ಯಲ್ಲಪ್ಪ ಎಚ್.ಬಾಬರಿ, ಬಸವರಾಜ ಗಾಜಿ, ಬಾಳಪ್ಪ ಗಂಗರಾತ್ರಿ, ಸಂತೋಷ ಯಲಬುರ್ಗಿ, ಶಿವನಪ್ಪ ಯತ್ನಟ್ಟಿ, ಸಂತೋಷ ಬಾಚಲ್ಲಾಪುರ, ಮಾರುತಿ ಜೋಗಿನ, ಮಲ್ಲಪ್ಪ ಯತ್ನಟ್ಟಿ, ಮಲ್ಲಪ್ಪ ಅಂಗಡಿ, ಶಿವಕುಮಾರ ಯತ್ನಟ್ಟಿ, ನೀಲಪ್ಪ ಗಾಜಿ, ಬಸವರಾಜ ಯಲಬುರ್ಗಿ, ಶೇಖಪ್ಪ ಘಂಟಿ, ರಾಮಣ್ಣ ಖಂಡ್ರೆ, ದೇವಿಂದ್ರಪ್ಪ ಉಂಡಿ ಹಾಗೂ ನೂರಾರು ಅಭಿಮಾನಿಗಳು ಪಾಲ್ಗೊಂಡಿದ್ದರು.

---



ಗದಗ-ಬೆಟಗೇರಿ ವಾರ್ಡ್ ನಂ. 13ರ ನಗರಸಭಾ ಸದಸ್ಯ ಮುತ್ತು ಮುಶಿಗೇರಿ ದಂಪತಿಗಳಿಂದ ಶ್ರೀ ಬನ್ನಿ ಮಹಾಕಾಳಿ ಸೇವಾ ಸಮಿತಿ ರೇಲ್ವೆ ಪೊಲೀಸ್ ಕ್ವಾರ್ಟರ್ಸ್ ಹತ್ತಿರ, ಶರನ್ನವರಾತ್ರಿ ಉತ್ಸವದ ಪ್ರಯುಕ್ತ ಸುಮಂಗಲಿಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಿತು. ವೇ.ಮೂ ಹೇಮರಾಜ ಶಾಸ್ತ್ರೀ ಹಿರೇಮಠ (ಹೆಡಿಗ್ಗೊಂಡ) ಶ್ರೀ ವೀರೇಶ್ವರ ಪುಣ್ಯಾಶ್ರಮ ಗದಗ ಇವರಿಂದ ಪುರಾಣ ಕಾರ್ಯಕ್ರಮ ಸತತ 9 ದಿನಗಳವರೆಗೆ ನಡೆಯಲಿದೆ. ಈ ಪವಿತ್ರ ಕಾರ್ಯಕ್ರಮದಲ್ಲಿ ಓಣಿಯ ಸಮಸ್ತ ಸುಮಂಗಲಿಯರು, ಗುರು-ಹಿರಿಯರು, ಸಕಲ ಸದ್ಭಕ್ತರು ಪಾಲ್ಗೊಂಡಿದ್ದರು.



ನವರಾತ್ರಿ ನವರಂಗು (ದಸರಾ ವಿಶೇಷತೆ) ನೇತ್ರಾ, ರೋಣ

### ಅಡವೀಂದ್ರ ಸ್ವಾಮಿ ಮಠದಲ್ಲಿ ಶ್ರೀದೇವಿ ಪುರಾಣ, ಸಾಧಕರಿಗೆ ಪ್ರಶಸ್ತಿ ಪ್ರದಾನ

# ಧರ್ಮದ ಹಾದಿಯಲ್ಲಿ ಮುನ್ನಡೆಯಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ಎಲ್ಲರೂ ಧರ್ಮವಂತರಾಗಿ, ಧರ್ಮದ ಹಾದಿಯಲ್ಲಿ ಮುನ್ನಡೆಯಿರಿ. ಮಕ್ಕಳಿಗೆ ಒಳ್ಳೆಯ ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಕಲಿಸಿ ಎಂದು ನರಗುಂದದ ಸಿದ್ದೇಶ್ವರ ಪಂಚಗ್ರಹಗುಡ್ಡ ಹಿರೇಮಠದ ಪೂಜ್ಯ ಸಿದ್ಧಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಅವರು ಗದುಗಿನ ಅಡವೀಂದ್ರ ಸ್ವಾಮಿ ಮಠದಲ್ಲಿ ಜರುಗಿದ ದಸರಾ ಮಹೋತ್ಸವದ ಶ್ರೀದೇವಿ ಪುರಾಣ, ಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಡಾ. ರಾಜಗುರು ಗುರುಸ್ವಾಮಿ ಕಲಕೇರಿ ಪುರಾಣ ಸನ್ನಿವೇಶವನ್ನು ವಿವರಿಸುತ್ತ, ಅಪಾರ ಶಕ್ತಿಯುಳ್ಳ ಮಹಿಷಾಸುರ ಯಾರಿಂದಲೂ ಹತನಾಗದಿರುವ ವರ ಬ್ರಹ್ಮ ದೇವನಿಂದ ಪಡೆದಿದ್ದರೂ ತನ್ನ ಅಪರಿಮಿತ ಪರಾಕ್ರಮ ಶಕ್ತಿಯನ್ನು ಶುಂಭ-ನಿಶುಂಭರ ಜೊತೆಗೂಡಿ ಸ್ವಾರ್ಥಕ್ಕೆ ಬಳಕೆ ಮಾಡಿಕೊಂಡದ್ದರಿಂದ ಶ್ರೀದೇವಿ ಜೊತೆ ಯುದ್ಧ ಮಾಡಿ ಪರಾಜಿತಗೊಂಡ ಸನ್ನಿವೇಶಗಳನ್ನು ವಿವರಿಸಿ, ನಾವು ನಮ್ಮಲ್ಲಿರುವ ಶಕ್ತಿಯನ್ನು ಸಮಾಜದ ಸದುದ್ದೇಶಕ್ಕೆ ಸದ್ಬಳಕೆ ಮಾಡಿದರೆ ನಮ್ಮ ಸ್ವತ್ತು, ಆರೋಗ್ಯ ವೃದಿಯಾಗುತ್ತೆ ಹಾಗೂ ಮಾನಸಿಕ ನೆಮ್ಮದಿ ಪಡೆಯಬಹುದು ಎಂದರು.




ಪುರಾಣ ಪ್ರವಚನಗಳನ್ನು ಕೇಳುವುದರಿಂದ ಮನಸ್ಸು ಪ್ರಸನ್ನಗೊಳ್ಳುವದು, ಸದ್ಗುಣಗಳು ಮೂಡುವವು ಎಂದರಲ್ಲದೆ ನಾವಿಂದು ವೈಚಾರಿಕ ಚಿಂತನೆಗಳನ್ನು ಮಾಡಬೇಕು. ಪರಿಸರ ಸಂರಕ್ಷಣೆ, ನೀರಿನ ಮಿತ ಬಳಕೆ ಮಾಡಬೇಕು. ನೈಸರ್ಗಿಕ ಸಂಪನ್ಮೂಲಗಳಾದ ಗಾಳಿ, ಜಲ, ಸೌರ ಶಕ್ತಿಯನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದರು.

ಸಾಧಕ ಮಹನೀಯರನ್ನು ಸನ್ಮಾನಿಸುವದು ಯುವ ಪೀಳಿಗೆಗೆ ಸ್ಫೂರ್ತಿ-ಮಾದರಿ ಆಗಲೆಂದು. ಜೊತೆಗೆ ಸಾಧಕರಿಗೆ ಪ್ರೋತ್ಸಾಹ ಕೃತಜ್ಞತೆ ಸಲ್ಲಿಸುವ ಉದ್ದೇಶದಿಂದ. ಯುವಕರು ಹಿರಿಯರನ್ನು ಅನುಸರಿಸಬೇಕು, ಸಾಧಕರನ್ನು ನೋಡಿ ತಾವೂ ಆ ರೀತಿಯ ಸಾಧನೆ ಮಾಡಿ ಜೀವನದಲ್ಲಿ ಮುಂದೆ ಬರುವದನ್ನು ಕಲಿಯಬೇಕೆಂದರು.

ಸಮಾರಂಭದಲ್ಲಿ ಸಹಕಾರ ಇಲಾಖೆಯ ವಿಶ್ರಾಂತ ಸಹಾಯಕ ನಿಬಂಧಕ ಬಿ.ಎಂ. ಬಿಳೇಯಲಿ ಅವರಿಗೆ 'ಸಮಾಜ ಸೇವಾ ರತ್ನ' ಗದುಗಿನ ಶಿವಾನಂದ ಯೋಗ ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎಸ್. ಹಿರೇಮಠ ಅವರಿಗೆ 'ಯೋಗ ಸಾಧನಾ ರತ್ನ', ರೋಣದ ಗಣ್ಯ ಉದ್ಯಮಿ ಶಿವಣ್ಣ ಪಲ್ಲೇದ ಅವರಿಗೆ 'ಶ್ರೇಷ್ಠ ಉದ್ಯಮಶ್ರೀ' ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಸಮ್ಮುಖವನ್ನು ಶ್ರೀಮಠದ ಧರ್ಮದರ್ಶಿ ಮಹೇಶ್ವರ ಸ್ವಾಮೀಜಿ ಹೊಸಳ್ಳಿಮಠ ವಹಿಸಿದ್ದರು.

#### ಇಂದಿನ ಕಾರ್ಯಕ್ರಮ

ಅ. 10ರ ಸಂಜೆ 6.30 ಗಂಟೆಗೆ ದುರ್ಗಾಷ್ಟಮಿ ಕಾರ್ಯಕ್ರಮ ಜರುಗಲಿದ್ದು, ಮುಖ್ಯ ಅತಿಥಿಗಳಾಗಿ ವಿಜಯನಗರದ ಶ್ರೀಕೃಷ್ಣ ದೇವರಾಯ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ. ಕೆ.ಎಂ. ಮೈತ್ರಿ ಹಾಗೂ ಉಪನ್ಯಾಸಕಿ ಡಾ.ದ್ರಾಕ್ಷಾಯಣಿ ಮೈತ್ರಿ, ಅಖಿಲ ಭಾರತ ಸೇವಾ ಸಮಿತಿ ಗದಗ ಅಧ್ಯಕ್ಷ ಪ್ರಭಯ್ಯ ದಂಡಾವತಿಮಠ, ಪ್ರೀತಿ ದಂಡಾವತಿಮಠ ಆಗಮಿಸುವರು.

ಭಕ್ತಿಸೇವೆಯನ್ನು ಎ.ಎಂ. ವಿರಕ್ತಮಠ, ರಾಕೇಶ ದಾಸರಿ, ಎಸ್.ಎಸ್. ಸಜ್ಜನರ, ಶೋಭಾ ದಶವಂತ, ರೇಖಾ ಜೀರಾಳ, ಪಿ.ಟಿ. ನಾರಾಯಣಪೂರ, ಸಿದ್ಧಲಿಂಗಪ್ಪ ಕೋಟಿ, ಅತೀಶ್ ಖಂಡಪ್ಪಗೌಡ್ರ ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

ವೇದಿಕೆಯ ಮೇಲೆ ಜಾತ್ರಾ ಸಮಿತಿಯ ಅಧ್ಯಕ್ಷ ಬಸವರಾಜ ಪಲ್ಲೇದ, ಮಹಿಳಾ ಸಮಿತಿಯ ಅಧ್ಯಕ್ಷೆ ಲೀಲಾವತಿ ಬಿಳೇಯಲಿ ಉಪಸ್ಥಿತರಿದ್ದರು. ಡಾ. ರಾಜಗುರು ಗುರುಸ್ವಾಮಿ ಕಲಕೇರಿ, ಚನ್ನಬಸಯ್ಯ ಹೇಮಗಿರಿಮಠ ಅವರಿಂದ ಪುರಾಣ ಪ್ರವಚನ ಜರುಗಿತು.

ಜೆ.ವ್ಹಿ. ಹಿರೇಮಠ ಸ್ವಾಗತಿಸಿದರು. ಮಂಗಲಾ ಯಾನಮಶೆಟ್ಟಿ, ಸುವರ್ಣಾ ಮದರಿಮಠ ನಿರೂಪಿಸಿದರು. ಎಸ್.ಎಂ. ಕಾತರಕಿ ವಂದಿಸಿದರು.

## ಉದಾತ್ತ ಮೌಲ್ಯಗಳೊಂದಿಗೆ ಬಾಳಬೇಕು

▸▸ಮೊದಲನೇ ಪುಟದಿಂದ

ಮೈಸೂರು ಅರಮನೆ ಜಪದಕಟ್ಟೆಮಠದ ಡಾ.ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯರು ನೇತೃತ್ವ ವಹಿಸಿ ಮಾತನಾಡಿ, ಹುಟ್ಟು ಎಷ್ಟು ಸಹಜವೋ ಮರಣವೂ ಅಷ್ಟೇ ನಿಶ್ಚಿತ. ಈ ಹುಟ್ಟು-ಸಾವುಗಳ ಮಧ್ಯದ ಬದುಕು ಸಮೃದ್ಧಿಗೊಳಿಸಿಕೊಳ್ಳುವುದು ಅವರವರ ಜವಾಬ್ದಾರಿಯಾಗಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ದಸರಾ ಧರ್ಮ ಯಜ್ಞ ಬಾಳಿನ ಅಂಧಕಾರ ಕಳೆಯಲು ದಿಕ್ಸೂಚಿಯಾಗಿದೆ ಎಂದರು.

ಸಮ್ಮುಖ ವಹಿಸಿದ ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರ, ಲಿಂಗಸುಗೂರು ಅಮರೇಶ್ವರಮಠದ ಗಜದಂಡ ಶಿವಾಚಾರ್ಯರು ಮಾತನಾಡಿದರು.

ವಿ.ಪ ಸದಸ್ಯ ಸಿ.ಟಿ. ರವಿ ಮಾತನಾಡಿ, ಧರ್ಮ ಸಂಸ್ಕೃತಿಯ ಪುನರುತ್ಥಾನಕ್ಕಾಗಿ ಎಲ್ಲರೂ ಶ್ರಮಿಸಬೇಕಾಗಿದೆ. ಧರ್ಮ ಧರ್ಮಗಳಲ್ಲಿ ವ್ಯಕ್ತಿ ವ್ಯಕ್ತಿಗಳ ಮಧ್ಯೆ ಸುಮಧುರ ಬಾಂಧವ್ಯ ಬೆಳೆದು ಬಂದಾಗ ಸಮಾಜದಲ್ಲಿ ಶಾಂತಿ ನೆಲೆಗೊಳ್ಳುವುದು. ಈ ದಿಶೆಯಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಶ್ರಮಿಸಿ ಮಾರ್ಗದರ್ಶನ ನೀಡುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಜಗದೀಶ ಗುಡಗುಂಟಿಮಠ, ಮಾಜಿ ಕೇಂದ್ರ ಸಚಿವ ಬಸವರಾಜ ಪಾಟೀಲ ಅನ್ವರಿ, ಮಾಜಿ ಶಾಸಕ ಅಮರೇಗೌಡ ಪಾಟೀಲ ಬಯ್ಯಾಪುರ, ನರೇಗಲ್ಲಿನ ಬಸವರಾಜ ದಿಂಡೂರ ಮಾತನಾಡಿದರು.

ರಾಜೇಶ್ವರ ಶಿವಾಚಾರ್ಯರು ಮೆಹಕರ, ಬಳ್ಳಾರಿ ಕಲ್ಯಾಣಮಠದ ಕಲ್ಯಾಣ ಸ್ವಾಮಿಗಳು, ತ್ರಿಪುರಾಂತ-ಬಸವಕಲ್ಯಾಣದ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು, ಹುಬ್ಬಳ್ಳಿಯ ಡಾ. ಎನ್.ಎ. ಚರಂತಿಮಠ, ಬಸವರಾಜ ಮಳಗಿ, ಶಂಕರಣ್ಣ ಕೊತಬಾಳ, ರುದ್ರಗೌಡ್ರು ಕುರುಡಗಿ, ವೀರಮ್ಮ ಹಿರೇಮಠ, ರೇಣುಕಪ್ರಸಾದಸ್ವಾಮಿ ಹಿರೇಮಠ, ಗದಗಿನ ಮಹದೇವಗೌಡ ತೆಲೆಗೌಡ್ರ, ರಾಜಣ್ಣ ಮಲ್ಲಾಡದ, ಅಜ್ಜಣ್ಣ ಮಲ್ಲಾಡದ, ಮಂಜಣ್ಣ ಬೆಲೇರಿ, ವೆಂಕಟೇಶ್ವರ ದ್ಯಾಸಲಕೇರಿ, ಲಿಂಗಸುಗೂರಿನ ಬಸವರಾಜ ಮತ್ತು ಶಿವಕುಮಾರ ನಂದಿಕೋಲಮಠ, ಮಲ್ಲಣ್ಣ ವಾರದ, ಡಾ. ಬಸನಗೌಡ್ರು ಪಾಟೀಲ ರಾಯಚೂರು ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

ಮಾಜಿ ಸಚಿವ ಶ್ರೀ ರಂಭಾಪುರಿ ಜಗದ್ಗುರುಗಳ ದಸರಾ ದಾಸೋಹ ಸಮಿತಿ ಅಧ್ಯಕ್ಷ ಕಳಕಪ್ಪ ಬಂಡಿ ಸರ್ವರನ್ನು ಸ್ವಾಗತಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಗದಗಿನ ಗಾನಭೂಷಣ ವೀರೇಶ ಕಿತ್ತೂರ ಮತ್ತು ಕುಮಾರ ಶಿವು ಹಿರೇಮಠ ಹುಬ್ಬಳ್ಳಿ ಇವರಿಂದ ಸಂಗೀತ ಜರುಗಿತು. ಶಿವಮೊಗ್ಗದ ಶಾಂತಾ ಆನಂದ ನಿರೂಪಿಸಿದರು. ಸಪ್ರಗತಿ ಹಿರೇಮಠ ಇವರಿಂದ ಭರತ ನಾಟ್ಯ ಪ್ರದರ್ಶನ ನಡೆಯಿತು.

ಮಲ್ಲಿಕಾರ್ಜುನ ಸಂಗಪ್ಪ ಹರ್ಲಾಪುರ ಅಬ್ಬಿಗೇರಿ-ಧಾರವಾಡ ಇವರಿಂದ ಅನ್ನ ದಾಸೋಹದ ಸೇವೆ ಜರುಗಿತು.

### ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದಿಂದ ವಿವಿಧ ಕಾರ್ಯಕ್ರಮ

## ಅ.11ರಂದು ನಂದಾ ದೀಪಾರಾಧನೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನೂರಾರು ವರ್ಷಗಳ ಇತಿಹಾಸ ಹೊಂದಿರುವ ಪಟ್ಟಣದ ಶ್ರೀ ಲಿಂಬಯ್ಯಸ್ವಾಮಿಮಠದಲ್ಲಿ ಸಾಂಪ್ರದಾಯಿಕವಾಗಿ ನಡೆದುಕೊಂಡು ಬಂದಿರುವ ನಂದಾ ದೀಪಾರಾಧನಾ ಮಹೋತ್ಸವ ಮತ್ತು ಸುಪ್ತ ಚೇತನಗಳಿಗೆ ಸನ್ಮಾನ ಕಾರ್ಯಕ್ರಮ ಅ.11ರ ಸಂಜೆ 7ಕ್ಕೆ ಶ್ರೀಮಠದ ಪ್ರಾಂಗಣದಲ್ಲಿ ನೆರವೇರಲಿದೆ ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ ಹೇಳಿದರು.

ಅವರು ಬುಧವಾರ ಶ್ರೀಮಠದಲ್ಲಿ ಪ್ರತಿಷ್ಠಾನದ ಧರ್ಮದರ್ಶಿಗಳನ್ನೊಳಗೊಂಡ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಶ್ರೀಮಠದಲ್ಲಿ ಹಿರಿಯರ ಕಾಲದಿಂದಲೂ ಪ್ರತಿವರ್ಷ ಯುಗಾದಿ ಮತ್ತು ನವರಾತ್ರಿಯಲ್ಲಿ ವಿಶೇಷ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ. ಕಳೆದ 2 ದಶಕಗಳಿಂದ ಹಿರಿಯರಾದ ಲಿಂ. ಎಲ್.ಸಿ. ಲಿಂಬಯ್ಯಸ್ವಾಮಿಮಠ, ಲಿಂ. ಶರಣಯ್ಯನವರು ಲಿಂಬಯ್ಯಸ್ವಾಮಿಮಠ ಅವರ ಇಚ್ಛಾಶಕ್ತಿಯಿಂದ ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನ ಸ್ಥಾಪಿಸಿ ಆ ಮೂಲಕ ಅನೇಕ ಧಾರ್ಮಿಕ, ಸಮಾಜಮುಖಿ ಮತ್ತು ವಿವಿಧ ಕ್ಷೇತ್ರಗಳಲ್ಲಿ ನಿಸ್ವಾರ್ಥ ಸೇವೆ ಮಾಡುವ ಸುಪ್ತ ಚೇತನಗಳನ್ನು, ನೇತ್ರದಾನ, ದೇಹದಾನಕ್ಕೆ ಪ್ರೇರೇಪಿಸಿ ಅವರನ್ನು ಗುರುತಿಸಿ ಸನ್ಮಾನಿಸಲಾಗುತ್ತಿದೆ.

ಈ ವರ್ಷವೂ ಧಾರವಾಡ ಮುರಘಾಮಠದ ಡಾ.ಮಲ್ಲಿಕಾರ್ಜುನ ಮಹಾಸ್ವಾಮಿಗಳು ಸಾನ್ನಿಧ್ಯದಲ್ಲಿ ಆವಿಷ್ಕಾರ ಸುಪ್ತ ಚೇತನ ಕೆಸರಳ್ಳಿಯ ಹಾಲಯ್ಯ ಕುಲಕರ್ಣಿ ಅವರಿಗೆ 'ಕಾಯಕಜೀವಿ', ಪಟ್ಟಣದ ಪ್ರತಿಮಾ ಮಹಾಂತಶೆಟ್ಟರ ಅವರಿಗೆ 'ಆದರ್ಶ ಸಾತ್ವಿಕ ಜೀವಿ' ಮತ್ತು ಫಕ್ಕೀರಪ್ಪ ಕಳ್ಳಿಮನಿ ಅವರಿಗೆ 'ಸಮಾಜ ಜೀವಿ' ಎಂಬ ಬಿರುದಾಂಕಿತದ ಗೌರವ ಪುರಸ್ಕಾರ ನೀಡಲಾಗುವದು. ಈ ವೇಳೆ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಉಪಾಧ್ಯಕ್ಷ ಫಿರ್ದೋಸ್ ಆಡೂರ, ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ನಾಗರಾಜ ಶಿಗ್ಲಿ ಅವರನ್ನು ಸನ್ಮಾನಿಸಲಾಗುವುದು ಎಂದರು.

ಈ ವೇಳೆ ಪ್ರತಿಷ್ಠಾನದ ಉಪಾಧ್ಯಕ್ಷ ಚಿದಾನಂದ ಲಿಂಬಯ್ಯಸ್ವಾಮಿಮಠ, ಧರ್ಮದರ್ಶಿಗಳಾದ ಶಾಂತರಾಜ ಓದುನವರ, ಕೆ.ಎಸ್. ಕುಲಕರ್ಣಿ, ನಿರಂಜನ ಲಿಂಬಯ್ಯಸ್ವಾಮಿಮಠ, ಬಸಣ್ಣ ಬೆಂಡಿಗೇರಿ, ಬಸಣ್ಣ ಗಾಂಜಿ, ಮಹೇಶ ಲಿಂಬಯ್ಯಸ್ವಾಮಿಮಠ, ಗಂಗಪ್ಪ ದುರಗಣ್ಣವರ,ನಿಂಗಪ್ಪ ಬನ್ನಿ, ವಿ.ಜಿ. ಪಡಗೇರಿ, ನೀಲಪ್ಪ ಪೂಜಾರ, ರಾಮಣ್ಣ ಪಡಗೇರಿ, ಎಂ.ಕೆ. ಕಳ್ಳಿಮಠ, ಶರಣಪ್ಪ ಗುಳಗಣ್ಣವರ, ಎಸ್.ಕೆ. ಹವಾಲ್ದಾರ ಇದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ವಹಿಸುವರು. ಪಟ್ಟಣದ ಅಗಡಿ ಕಾಲೇಜಿನ ಉಪನ್ಯಾಕ ಪ್ರೊ. ಸೋಮಶೇಖರ ಕೆರಿಮನಿ ಉಪನ್ಯಾಸ ನೀಡುವರು. ಹರ್ಲಾಪುರದ ಸಾಂಬಯ್ಯ ಹಿರೇಮಠ ಹಾಗೂ ಸಂಗಡಿಗರು ಜಾನಪದ ಸಂಗೀತ ಕಾರ್ಯಕ್ರಮ ನಡೆಸುವರು. ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ ಮನವಿ ಮಾಡಿದರು.

### ಎಸ್.ಎಸ್.ಕೆ. ದಸರಾ ಉತ್ಸವದ

## ಇಂದಿನ ಕಾರ್ಯಕ್ರಮಗಳು

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಎಸ್.ಎಸ್.ಕೆ. ದಸರಾ ಉತ್ಸವ ಸಮಿತಿ ವತಿಯಿಂದ ಅ.10ರ ಮುಂಜಾನೆ 11 ಗಂಟೆಗೆ ಸಮಾಜದ ಮಕ್ಕಳಿಗಾಗಿ ಸ್ಮರಣ ಶಕ್ತಿ ಸ್ಪರ್ಧೆ, ಚೆಸ್ ಸ್ಪರ್ಧೆ, ನಿಬಂಧ ಸ್ಪರ್ಧೆ ಹಾಗೂ ಚಿತ್ರಕಲಾ ಸ್ಪರ್ಧೆಗಳು ನಡೆಯಲಿವೆ.

ಈ ಎಲ್ಲ ಸ್ಪರ್ಧೆಗಳನ್ನು ಕೇಶವ ರಾಯಬಾಗಿ, ಗಣೇಶ ಪವಾರ, ಶ್ರೀಧರ ಬಾಕಳೆ, ಬಲರಾಮ ರಾಯಬಾಗಿ, ತರುಣ ಮೇರವಾಡೆ ಇವರು ನಡೆಸಿಕೊಡಲಿದ್ದಾರೆ. ನಂತರ ಸಾಯಂಕಾಲ 7 ಗಂಟೆಗೆ ದುರ್ಗಾಷ್ಟಮಿ ಪೂಜಾ ಸಮಾರಂಭ ನೆರವೇರುವುದು ಎಂದು ಪ್ರಕಟಣೆ ತಿಳಿಸಿದೆ.

## ಆರೋಗ್ಯವಂತ ಶಿಶು ದೇಶದ ಆಸ್ತಿ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಿನ ಡಂಬಳ ಹೋಬಳಿಯ ಪ್ರಾ.ಆ.ಕೇಂದ್ರ ಜಂತಲಿಶಿರೂರು ವ್ಯಾಪ್ತಿಯ ಹಳ್ಳಿಕೇರಿ ಗ್ರಾಮದಲ್ಲಿ ಆರೋಗ್ಯವಂತ ಶಿಶು ಪ್ರದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾ.ಪಂ ಸದಸಸ್ಯರಾದ ನಿರ್ಮಾಲಾ ಹೊನಕೇರಿ ವಹಿಸಿಕೊಂಡಿದ್ದರು.

ಮುಖ್ಯ ಅತಿಥಿಗಳಾಗಿ ಪ್ರಾ.ಆ. ಕೇಂದ್ರ ಜಂತಲಿಶಿರೂರಿನ ಆಡಳಿತ ವೈದ್ಯಾಧಿಕಾರಿ ಡಾ. ಆನಂದ ಕಗ್ಗೋಡ ಪಾಲ್ಗೊಂಡು ಮಾತನಾಡಿ, ತಾಯಿ ಮತ್ತು ಗರ್ಭಿಣಿಯರು ಉತ್ತಮ ಆಹಾರ ಸೇವಿಸಬೇಕು. ಇದರಿಂದ ತಾಯಿ-ಮಗುವಿನ ಆರೋಗ್ಯ ಉತ್ತಮಗೊಳ್ಳುತ್ತದೆ. ಗರ್ಭಿಣಿಯರು ಆರೋಗ್ಯದ ಕಡೆಗೆ ಆದ್ಯತೆ ನೀಡುವದು, ಪೌಷ್ಠಿಕ ಆಹಾರ ಸೇವನೆಯೆಡೆ ಹೆಚ್ಚಿನ ಕಾಳಜಿಯನ್ನು ಹೊಂದಿದರೆ ಆರೋಗ್ಯವಂತ ಶಿಶು ಜನಿಸುತ್ತದೆ. ಇದರಿಂದ ತಾಯಿ ಮತ್ತು ಶಿಶುವಿನ ಮರಣ ತಪ್ಪಿಸಲು ಸಾಧ್ಯ ಎಂದರು.



ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಮ್.ಎಫ್. ಕಲಕಂಬಿ ಮಾತನಾಡಿ, ಪ್ರತಿ ಕುಟುಂಬ ಒಂದು ಮಗುವಿನಿಂದ ಮತ್ತೊಂದು ಮಗುವಿಗೆ 3 ವರ್ಷ ಅಂತರವನ್ನು ಕಾಪಾಡಿಕೊಂಡರೆ ತಾಯಿ ಹಾಗೂ ಮಗುವಿನ ಆರೋಗ್ಯ ಉತ್ತಮಗೊಳ್ಳುತ್ತದೆ. ಪೋಷಕರು ಹೆಣ್ಣುಮಕ್ಕಳಿಗೆ ಶಿಕ್ಷಣ ಕೊಡಿಸುವದರೊಂದಿಗೆ 18 ವರ್ಷ ಪೂರೈಸಿದ ನಚಿತರವೇ ವಿವಾಹ ಮಾಡಬೇಕು ಎಂದು ತಿಳಿಸಿದರು.

ಪ್ರಯೋಗಶಾಲಾ ಅಧಿಕಾರಿ ಅನ್ವರಗೌಡ ಪಾಟೀಲ ಮಾತನಾಡಿದರು. ಜಿಲ್ಲಾ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಕಾಂಬಳೆ ಕಾರ್ಯಕ್ರಮ ಉದ್ಘಾಟಿಸಿದರು. ಗೀತಾ ಜಾಧವ್ ಸ್ವಾಗತಿಸಿದರು. ಸಮುದಾಯ ಆರೋಗ್ಯ ಅಧಿಕಾರಿ ವಿಜಯ್ ಬಿ ವಂದಿಸಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಶಿವಕುಮಾರ ಗುರಿಕಾರ, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಗ್ರಾಮದ ತಾಯಂದಿರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

## ನಿವೃತ್ತ ಸೈನಿಕನಿಗೆ ಅದ್ದೂರಿ ಸ್ವಾಗತ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಭಾರತೀಯ ಸೇನೆಯಲ್ಲಿ 24 ವರ್ಷ ಸೇವೆ ಸಲ್ಲಿಸಿ ಗ್ರಾಮಕ್ಕೆ ಆಗಮಿಸಿದ ಸೈನಿಕ ಜಗದೀಶ ಲಿಂಬಿಕಾಯಿ ಅವರನ್ನು ಅದ್ದೂರಿಯಾಗಿ ಬರಮಾಡಿಕೊಳ್ಳಲಾಯಿತು. ಇಲ್ಲಿಯ ಬಸ್ ನಿಲ್ದಾಣದಲ್ಲಿ ಮಹಿಳೆಯರು ಸಿಂಧೂರ ತಿಲಕವನ್ನಿಟ್ಟು ಆರತಿ ಬೆಳಗಿದರು.

ಮಾಜಿ ಮತ್ತು ಹಾಲಿ ಸೈನಿಕರ ಸಂಘದ ಸದಸ್ಯರು ಹೂ ಮಾಲೆ ಹಾಕಿ ಘೋಷಣೆಗಳನ್ನು ಕೂಗಿದರು. ನಂತರ ಬಸ್ ನಿಲ್ದಾಣದಿಂದ ಮಾರುತಿ ದೇವಸ್ಥಾನದವರೆಗೆ ಮೆರವಣಿಗೆ ಮೂಲಕ ಕರೆತರಲಾಯಿತು.



ದೇವಸ್ಥಾನದ ಆವರಣದಲ್ಲಿ ಸೈನಿಕರ ಅಭಿಮಾನಿಗಳು ಸನ್ಮಾನಿಸಿ ಗೌರವಿಸಿದರು. ಗ್ರಾಮ ಪಂಚಾಯತ ಅಧ್ಯಕ್ಷ ಕೆ.ಎಸ್. ಪೂಜಾರ, ಮಾಜಿ ಸೈನಿಕರಾದ ದತ್ತಾತ್ರೇಯ ಜೋಶಿ, ಪರಸಪ್ಪ ಗುಂಡಳ್ಳಿ, ಬಸವರಾಜ ಕುಕನೂರು, ಶರಣಯ್ಯ ಗಂಧದ, ಶಿವಪ್ಪ ಬಾಳಿತೋಟ, ಹನುಮಂತಪ್ಪ ಭಜಂತ್ರಿ, ಅಂದಾನಯ್ಯ ನರಗುಂದಮಠ, ಗಂಗಾಧರ ಹಾಲಿನವರ, ಹಾಲಿ ಸೈನಿಕ ಕಳಕಪ್ಪ ಕುಂಬಾರ, ಬಸವರಾಜ ಮುಳ್ಳಾಳ, ಮರಿಯಪ್ಪ ವಡ್ಡರ ಸೇರಿದಂತೆ ಸೈನಿಕರ ಅಭಿಮಾನಿಗಳು ಹಾಜರಿದ್ದರು.

## ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ಸರಳಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯ ಸರ್ಕಾರ ಪತ್ರಕರ್ತರಿಗೆ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಯಾಣಿಸಲು ಉಚಿತ ಬಸ್ ಪಾಸ್ ಯೋಜನೆಯನ್ನು ಜಾರಿಗೊಳಿಸಿದ್ದರೂ, ಸಲ್ಲದ ನಿಯಮಾವಳಿಯನ್ನು ವಿಧಿಸಿದ್ದರಿಂದ ಗ್ರಾಮೀಣ ಪತ್ರಕರ್ತರು ಈ ಯೋಜನೆಯಿಂದ ವಂಚಿತರಾಗುತ್ತಿದ್ದಾರೆ. ಸರ್ಕಾರ ನಿಯಮಗಳನ್ನು ಕೂಡಲೇ ಮಾರ್ಪಡಿಸಿ ಗ್ರಾಮೀಣ ಭಾಗದಲ್ಲಿ ಕಾರ್ಯನಿರ್ವಹಿಸುವ ಪತ್ರಕರ್ತರಿಗೆ ಬಸ್ ಪಾಸ್ ವಿತರಿಸಬೇಕೆಂದು ಆಗ್ರಹಿಸಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ತಹಸೀಲ್ದಾರ ವಾಸುದೇವ ಸ್ವಾಮಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.




ತಾಲೂಕಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಮಲ್ಲು ಕಳಸಾಪುರ ಹಾಗೂ ಹಿರಿಯ ಪತ್ರಕರ್ತ ರಮೇಶ ನಾಡಗೇರ ಮಾತನಾಡಿ, ಪತ್ರಕರ್ತರಿಗೆ ಬಸ್ ಪಾಸ್ ನೀಡುವಲ್ಲಿ ಅನೇಕ ನಿಬಂಧನೆ ವಿಧಿಸಿದ್ದರಿಂದ ಯಾವೊಬ್ಬ ಗ್ರಾಮೀಣ ಹಾಗೂ ತಾಲೂಕು ಪತ್ರಕರ್ತರಿಗೆ ಬಸ್ ಪಾಸ್ ಸೌಲಭ್ಯದಿಂದ ವಂಚಿತರಾಗುತ್ತಾರೆ. ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಉಚಿತ ಬಸ್ ಪಾಸ್ ನೀಡಿರುವುದಕ್ಕೆ ಕೇವಲ ಆಧಾರ್ ಕಾರ್ಡ್ ಮಾತ್ರ ಮಾನದಂಡವಾಗಿದೆ.

ರಾಜ್ಯದ ಗ್ರಾಮೀಣ ಭಾಗದಲ್ಲಿ ಪ್ರತಿನಿತ್ಯ ಜೀವನದ ಹಂಗು ತೊ-ರೆದು ಸುದ್ದಿಗಾಗಿ ಅಲೆದಾಡುವ ಪತ್ರಕರ್ತರ ಕಡೆಗಣನೆ ಆಗಿದೆ. ಸಮಾಜದ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುವ ಪತ್ರಕರ್ತರಿಗೆ ರಾಜ್ಯ ಸರ್ಕಾರದ ಆದೇಶದಲ್ಲಿರುವ ನಿಬಂಧನೆಗಳನ್ನು ಬದಲಿಸಿ ಹೊಸ ಆದೇಶ ಹೊರಡಿಸಿ ಎಲ್ಲ ಪತ್ರಕರ್ತರಿಗೂ ಈ ಯೋಜನೆ ನೀಡುವಂತಾಗಬೇಕು. ಇಲ್ಲವಾದಲ್ಲಿ ತಾಲೂಕು ಮಟ್ಟದಲ್ಲಿ ಹೋರಾಟ ಮಾಡುವುದು ಅನಿವಾರ್ಯವಾಗುತ್ತದೆ ಎಂದರು.

ಈ ವೇಳೆ ಪತ್ರಕರ್ತರಾದ ನಾಗರಾಜ ಹಣಗಿ, ದಿಗಂಬರ ಪೂಜಾರ, ಅಶೋಕ ಸೊರಟೂರ, ಮಹಾಲಿಂಗರಾಯ ಪೂಜಾರ, ಸುರೇಶ ಲಮಾಣಿ, ಪರಮೇಶ ಲಮಾಣಿ, ಸೋಮಣ್ಣ ಯತ್ತಿನಹಳ್ಳಿ, ಶಿವಲಿಂಗಯ್ಯ ಹೊತಗಿಮಠ, ಮಂಜುನಾಥ ರಾಠೋಡ ಇದ್ದರು.

## ದೇವಸ್ಥಾನದ ಅಡಿಗಲ್ಲು ಸಮಾರಂಭ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಕಾಳಿಕಾದೇವಿ ಟ್ರಸ್ಟ್ ಕಮಿಟಿ, ಶ್ರೀ ಕನಕ ನೌಕರ ಸಂಘ, ಶ್ರೀ ಕನಕದಾಸ ಯುವಕ ಮಂಡಳಿ ಹಳ್ಳಿಕೇರಿ ಗ್ರಾಮ ಇವರುಗಳ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 11ರಂದು ಬೆಳಗ್ಗೆ 11 ಗಂಟೆಗೆ ಶ್ರೀ ಬೀರಲಿಂಗೇಶ್ವರ ದೇವಸ್ಥಾನದ ಅಡಿಗಲ್ಲು ಸಮಾರಂಭವನ್ನು ಶ್ರೀ ಕಾಳಿಕಾದೇವಿ ಸಮುದಾಯ ಭವನದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ತಿಂಥಿಣಿಯ ಕನಕ ಗುರು ಪೀಠದ ಪೂಜ್ಯಶ್ರೀ ಸಿದ್ಧರಾಮನಂದಪುರಿ ಮಹಾಸ್ವಾಮೀಜಿಗಳು ಸಾನ್ನಿಧ್ಯ ವಹಿಸುವರು. ಕಲಕೇರಿ ಹಾಲುಮತ ಸಮಾಜದ ಗುರುಗಳಾದ ಪೂಜ್ಯಶ್ರೀ ಶಿವಲಿಂಗಯ್ಯ ಗುರುವಿನ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ರೋಣ ಶಾಸಕರು ಹಾಗೂ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್. ಪಾಟೀಲ ಆಗಮಿಸುವವರು.

ಅತಿಥಿಗಳಾಗಿ ಗದಗ ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರುಡಗಿ, ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಫಕೀರಪ್ಪ ಹೆಬಸೂರ, ಕುರಿ ಮತ್ತು ಉಣ್ಣೆ ನಿಗಮದ ಮಾಜಿ ಅಧ್ಯಕ್ಷ ವೈ.ಎನ್. ಗೌಡ್ರ, ಜಿ.ಪಂ ಮಾಜಿ ಉಪಾಧ್ಯಕ್ಷ ಬೀರಪ್ಪ ಬಂಡಿ, ಮುಂಡರಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಡಿ. ಮೋರನಾಳ, ಮುಂಡರಗಿ ತಾಲೂಕು ಕುರುಬರ ಸಂಘದ ಅಧ್ಯಕ್ಷ ಮಂಜುನಾಥ ಮುಂಡವಾಡ, ಕಾರ್ಯದರ್ಶಿ ರಾಘವೇಂದ್ರ ಕುರಿ, ಮುಂಡರಗಿ ತಾ.ಪಂ ಮಾಜಿ ಸದಸ್ಯರಾದ ಗಿಡ್ಡಪ್ಪ ಹಾರೋಗೇರಿ, ಹಾಲಪ್ಪ ಹರ್ತಿ, ಬಸಪ್ಪ ಮಲ್ಲನಾಯ್ಕರ ಹಾಗೂ ಮುಂಡರಗಿ ಎಪಿಎಂಸಿ ಮಾಜಿ ಉಪಾಧ್ಯಕ್ಷ ಹೇಮಣ್ಣ ಪೂಜಾರ ಆಗಮಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಪ್ರತಿ ರಂಗದಲ್ಲಿ ಅಭಿವೃದ್ಧಿಯೇ ದತ್ತು ಗ್ರಾಮದ ಉದ್ದೇಶ: ಪ್ರಕಾಶ ವಡ್ಡರ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಪ್ರತಿ ರಂಗದಲ್ಲಿ ಗ್ರಾಮವನ್ನು ಅಭಿವೃದ್ಧಿಪಡಿಸುವದೇ ದತ್ತು ಗ್ರಾಮದ ಉದ್ದೇಶವಾಗಿದೆಂದು ಜಿ.ಪಂ ಯೋಜನಾ ನಿರ್ದೇಶಕ ಪ್ರಕಾಶ ವಡ್ಡರ ಹೇಳಿದರು.

ಕೊಪ್ಪಳ ತಾಲೂಕಿನ ಬೆಟಗೇರಿ ಗ್ರಾ. ಪಂ. ವ್ಯಾಪ್ತಿಯ ಮೊರನಾಳ ಗ್ರಾಮದ ಮಲಿಯಾಂಬಿಕಾ ದೇವಸ್ಥಾನದ ಆವರಣದಲ್ಲಿ ಬುಧವಾರ ನಡೆದ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ದತ್ತು ಗ್ರಾಮ ಅಭಿವೃದ್ಧಿಗೆ ಆಯ್ಕೆ ಮಾಡಿರುವ ಕುರಿತು ಗ್ರಾಮಸ್ಥರೊಂದಿಗೆ ಜರುಗಿದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಗ್ರಾಮಸ್ಥರು ತಮ್ಮ ಗ್ರಾಮಕ್ಕೆ ಅವಶ್ಯವಿರುವ ಕಾಮಗಾರಿ ಕುರಿತು ಸಭೆಯಲ್ಲಿ ವಿವರಿಸಿದರು. ಎಲ್ಲಾ ತಾಂತ್ರಿಕ ಸಹಾಯಕರು ಪ್ರತಿ ಕಾಲೋನಿಗೆ ಭೇಟಿ ನೀಡಿ ಚರಂಡಿ, ರಸ್ತೆ, ಶಾಲಾಭಿವೃದ್ಧಿ ಕಾಮಗಾರಿಗಳು ಅನುಷ್ಠಾನಿಸಲು ಸಂಪೂರ್ಣ ಮಾಹಿತಿ ಸಲ್ಲಿಸುವಂತೆ ತಿಳಿಸಿದರು. ಸಣ್ಣ, ಅತೀ ಸಣ್ಣ ರೈತರಿಗೆ ನರೇಗಾದಡಿ ಸಿಗುವ ಎಲ್ಲಾ ಸೌಲಭ್ಯ ನೀಡಲಾಗುವದು. ಪ್ರತಿಯೊಬ್ಬರು ಯೋಜನೆಯ ಸದುಪಯೋಗ ಪಡೆದುಕೊಳ್ಳಲು ರೈತರು ಅರಿತುಕೊಂಡು ತಮ್ಮ ಆದ್ಯತಾ ಕಾಮಗಾರಿ ಪಟ್ಟಿ ಸಲ್ಲಿಸಲು ತಿಳಿಸಿದರು.

ಈ ಸಂದರ್ಭದಲ್ಲಿ ನರೇಗಾ ಸಹಾಯಕ ನಿರ್ದೇಶಕ ಯಂಕಪ್ಪ, ಗ್ರಾ. ಪಂ. ಅಧ್ಯಕ್ಷ ದುರಗಪ್ಪ ಭಜೆಂತ್ರಿ, ಗ್ರಾ.ಪಂ ಸದಸ್ಯ ಅಂದಪ್ಪ ಚೀಲಗೋದ್ರ ಹಾಗೂ ಭರಮಪ್ಪ ಹುಳ್ಳಿ, ಪಿಡಿಒ ದಾನಪ್ಪ ಸಂಗಟಿ, ತಾಂತ್ರಿಕ ಸಂಯೋಜಕ ಯಮನೂರಪ್ಪ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಗ್ರಾಮದ ಮುಖಂಡರಾದ ಚಂದ್ರಪ್ಪ ಹುಳ್ಳಿ, ಯಲ್ಲಪ್ಪ ಮಾಗಳಾದ, ದೇವಪ್ಪ ಮಾಗಳಾದ, ಸಣ್ಣ ಈರಪ್ಪ ಅಣಬಿ, ಮಂಜಪ್ಪ ಸಂಗಟಿ ಸೇರಿದಂತೆ ತಾಂತ್ರಿಕ ಸಹಾಯಕರು, ಬಿಎಫ್ಟಿಗಳು, ಗ್ರಾಮ ಪಂಚಾಯತ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆಯಡಿ ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ ಯುವ ಜನರಿಗೆ ಹೊಲಿಗೆ ತರಬೇತಿ ಹಾಗೂ ವಿಡಿಯೋಗ್ರಾಫಿ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಆಸಕ್ತ ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಗಳನ್ನು ಪಡೆದು ಅಕ್ಟೋಬರ್ 28 ರೊಳಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಸಹಾಯಕ ನಿರ್ದೇಶಕರು ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 08372- 238345 ರ ಮೂಲಕ ಸಂಪರ್ಕಿಸಬಹುದಾಗಿದೆ.

ತರಬೇತಿಯ ಶಿಬಿರಗಳ ವಿವರ ಈ ಕೆಳಗಿನಂತಿದೆ.

ಹೊಲಿಗೆ ತರಬೇತಿ (20 ದಿನಗಳು)07-11-2024 ರಿಂದ 26-11-2024 ರವರೆಗೆ, ಎಸ್. ಎಸ್.ಎಲ್. ಸಿ(ಪಾಸ್/ಫೇಲ್)ಕನಿಷ್ಠ 18 ವರ್ಷ ಗರಿಷ್ಟ 40 ವರ್ಷ ವಯೋಮಿತಿ ಹೊಂದಿರಬೇಕು. ತರಬೇತಿಯು ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯಲಿದೆ.

ವಿಡಿಯೋಗ್ರಾಫಿ ತರಬೇತಿ ಶಿಬಿರ (12 ದಿನಗಳು) 15-11-2024 ರಿಂದ 26-11-2024 ರವರೆಗೆ, ದ್ವಿತೀಯ ಪಿ.ಯು.ಸಿ.(ಪಾಸ್/ಫೇಲ್) ಕನಿಷ್ಠ 18 ವರ್ಷ, ಗರಿಷ್ಟ 40 ವರ್ಷ ವಯೋಮಿತಿ ಹೊಂದಿರಬೇಕು ತರಬೇತಿಯು ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯಲಿದೆ.

ಅ.14ರಂದು ಲಿಂ. ಡಾ. ತೋಂಟದ ಸಿದ್ಧಲಿಂಗ ಶ್ರೀಗಳ 6ನೇ ಪುಣ್ಯಸ್ಮರಣೆ । ಡಾ. ತೋಂಟದ ಶ್ರೀಗಳ ಸ್ಮಾರಕ ಪ್ರಶಸ್ತಿ ಪ್ರದಾನ

# ಡಾ. ಗೊ.ರು.ಚನ್ನಬಸಪ್ಪಗೆ ರಾಷ್ಟ್ರೀಯ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡದ ಕುಲಗುರುಗಳು, ಕೋಮು ಸೌಹಾರ್ದತೆಯ ಹರಿಕಾರರು, ತೃತಿಯ ಅಲ್ಲಮರೆಂದು ಖ್ಯಾತರಾಗಿರುವ ಲಿಂ. ಡಾ. ತೋಂಟದ ಸಿದ್ಧಲಿಂಗ ಶ್ರೀಗಳ 6ನೇ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ನಗರದ ತೋಂಟ-ದಾರ್ಯ ಮಠದ ಶಿವಾನುಭವ ಮಂಟಪದಲ್ಲಿ ಅ. 14ರಂದು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀಮಠದ ಕಾರ್ಯದರ್ಶಿ ಶಿವಾನಂದ ಪಟ್ಟಣಶೆಟ್ಟರ ಹೇಳಿದರು.

ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಪುಣ್ಯಸ್ಮರಣೆ ಜೊತೆಗೆ ಮರಣವೇ ಮಹಾನವಮಿ ಆಚರಣೆ, ಡಾ. ತೋಂಟದ ಸಿದ್ಧಲಿಂಗ ಸ್ವಾಮೀಜಿಗಳ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭ, ಗ್ರಂಥಗಳ ಬಿಡುಗಡೆ ಸಮಾರಂಭ ಜರುಗಲಿದೆ ಎಂದರು.

ಲಿಂ. ಡಾ. ತೋಂಟದ ಸಿದ್ಧಲಿಂಗ ಶ್ರೀಗಳು ತಮ್ಮ ಜೀವನದಲ್ಲಿ ಖಾಸಗಿ ಕಾರ್ಯಕ್ರಮ, ಜಯಂತಿ, ಹುಟ್ಟುಹಬ್ಬ, ತುಲಾಭಾರ ಮಾಡಿಸಿಕೊಂಡಿರಲಿಲ್ಲ. ಅವರ ಕಾಲಿಗೆ ಶಸ್ತ್ರ ಚಿಕಿತ್ಸೆ ಆಗುವವರೆಗೂ ಪಾದಚಾರಿಗಳಾಗಿ ಜಾತ್ರೆ ಮಾಡಿದರು. ಶ್ರೀಗಳು ಭಕ್ತರ ಜೊತೆಗೆ ಪಾದಯಾತ್ರೆಯಲ್ಲಿ ಭಾಗವಹಿಸುತ್ತಿದ್ದರು.




ಪಾದಯಾತ್ರೆ ಮಾಡುವಾಗ ಸಂತ ಶರೀಫರ ಹಾಡುಗಳನ್ನು ಹಾಡುತ್ತಾ ಪಾದಯಾತ್ರೆ ಮಾಡುತ್ತಿದ್ದರು. ನಂತರ ಯಡಿಯೂರ ಶ್ರೀ ಸಿದ್ದಲಿಂಗೇಶ್ವರದವರೆಗೆ ಪಾದಯಾತ್ರೆ ಮಾಡಲು ಆರಂಭಿಸಿದರು. ಸುಮಾರು 500ಕ್ಕೂ ಹೆಚ್ಚು ಜನ ಸತತ ಒಂದು ತಿಂಗಳು ಪಾದಯಾತ್ರೆ ಮಾಡುತ್ತಿದ್ದರು. ಸಿದ್ಧಲಿಂಗ ಶ್ರೀಗಳು ಸಾಮಾನ್ಯರಲ್ಲಿ ಸಾಮಾನ್ಯರಾಗಿ ಜೀವಿಸಿದ್ದರು ಎಂದು ಶಿವಾನಂದ ಪಟ್ಟಣಶೆಟ್ಟರ ಹೇಳಿದರು.

ಕಾರ್ಯಕ್ರಮದಲ್ಲಿ ಜಗದ್ಗುರು ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಮುದೇನಗುಡಿ ಅಡವಿಸಿದ್ದೇಶ್ವರಮಠದ ಡಾ. ನಿರುಪಾಧೀಶ್ವರ ಸ್ವಾಮೀಜಿ ಸನ್ಮಾನ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ ಎಂದರು.

ಶರಣ ಸಾಹಿತಿಗಳು, ಜಾನಪದ ವಿದ್ವಾಂಸರಾದ ನಾಡೋಜ ಡಾ. ಗೊ.ರು. ಚನ್ನಬಸಪ್ಪ ಪ್ರಶಸ್ತಿಯನ್ನು ಸ್ವಿಕರಿಸಲಿದ್ದಾರೆ. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಪ್ರಶಸ್ತಿ ಪ್ರದಾನ ಮಾಡುವರು ಎಂದು ವಿವರಿಸಿದರು.

ಮುಂಡರಗಿ-ಬೈಲೂರು ತೋಂಟದಾರ್ಯ ಶಾಖಾಮಠದ ನಿಜಗುಣಪ್ರಭು ತೋಂಟದಾರ್ಯ ಶ್ರೀಗಳು, ಶಿರೋಳ ತೋಂಟದಾರ್ಯ ಶಾಖಾಮಠದ ಶಾಂತಲಿಂಗ ಶ್ರೀಗಳು, ಆಳಂದ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಅನುಭವ ಮಂಟಪದ ಕೋರಣೇಶ್ವರ ಶ್ರೀಗಳು, ಸಂಡೂರು ವಿರಕ್ತಮಠದ ಪ್ರಭು ಸ್ವಾಮೀಜಿ, ಅರಸಿಕೆರೆ ಕೋಲಶಾಂತೇಶ್ವರ ಮಠದ ಶಾಂತಲಿಂಗ ದೇಶಿಕೇಂದ್ರ ಸ್ವಾಮೀಜಿ ಸಮ್ಮುಖ ವಹಿಸಿಕೊಳ್ಳಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಕೆ.ಎಚ್. ಬೆಳ್ಳೂರ, ಐ.ಬಿ. ಬೆನಕೊಪ್ಪ, ಅಂಬರೀಶ್ ಅಂಗಡಿ, ದಾನಯ್ಯ ಗಣಾಚಾರಿ, ಪ್ರವೀಣ, ಕೊಟ್ರೇಶ್ ಸೇರಿದಂತೆ ಅನೇಕರು ಇದ್ದರು.

### ಈವರೆಗಿನ ಪ್ರಶಸ್ತಿ ಪುರಸ್ಕೃತರು

2020-ಶ್ರೀ ಬಸವ ಟಿ.ವ್ಹಿ.
2021-ಜಸ್ಟಿಸ್ ನಾಗಮೋಹನದಾಸ್.
2022-ಡಾ. ಬಸವಲಿಂಗ ಸ್ವಾಮಿಜಿಗಳು.
2023-ಡಾ. ಎಸ್ ಎಂ ಜಾಮದಾರ.

## ಮಕ್ಕಳ ಕಾಯಿಲೆ, ತೊಂದರೆ ತಪಾಸಣೆ ನಡೆಸಿ ಸೂಕ್ತ ಚಿಕಿತ್ಸೆ ನೀಡಿ : ಡಿಸಿ ಅತುಲ್

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಮಕ್ಕಳ ಕಾಯಿಲೆಗಳು ಮತ್ತು ಕುಂಠಿತ ಬೆಳವಣಿಗೆಯ ತೊಂದರೆ ಬಗ್ಗೆ ತಪಾಸಣೆ ನಡೆಸಿ ಸೂಕ್ತ ಚಿಕಿತ್ಸೆ ನೀಡಲು ಶ್ರಮ ವಹಿಸುವಂತೆ ಜಿಲ್ಲಾಧಿಕಾರಿ ನಲಿನ್ ಅತುಲ್ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮ ಪ್ರಯುಕ್ತ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅ.09ರಂದು ಹಮ್ಮಿಕೊಂಡಿದ್ದ ಅಂತರ ಇಲಾಖೆ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಷ್ಟ್ರೀಯ ಆರೋಗ್ಯ ಅಭಿಯಾನದಲ್ಲಿ ತಾಯಂದಿರ ಮತ್ತು ಶಿಶುಗಳ ಮರಣ ಪ್ರಮಾಣ ಕಡಿಮೆ ಮಾಡಲು ಒತ್ತು ನೀಡಲಾಗುತ್ತಿದೆ. ಹುಟ್ಟುವ ಮಕ್ಕಳಲ್ಲಿ ಆ ಜನ್ಮ ನ್ಯೂನ್ಯತೆ 100ಕ್ಕೆ 6ರಿಂದ 7 ಮಕ್ಕಳಲ್ಲಿದ್ದು, ಶೇ.10ರಷ್ಟು ಮಕ್ಕಳಲ್ಲಿ ಕುಂಠಿತ ಬೆಳವಣಿಗೆ ಇರುತ್ತದೆ. ಪೌಷ್ಠಿಕ ಆಹಾರದ ಕೊರತೆ



ಇತರೆ ಕಾಯಿಲೆಗಳು ಬಂದು ಮಕ್ಕಳ ಮರಣ ಸಂಭವಿಸುವ ಸಾಧ್ಯತೆಯಿದ್ದು, ಇದನ್ನು ತಪ್ಪಿಸುವ ಉದ್ದೇಶದಿಂದ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮ ಆರಂಭವಾಗಿದೆ. ಹುಟ್ಟಿದ ಮಗುವಿನಿಂದ ಹಿಡಿದು 18 ವರ್ಷದವರೆಗಿನ ಮಕ್ಕಳಿಗೆ ಆಜನ್ಮ ನ್ಯೂನ್ಯತೆ, ಮಕ್ಕಳ ಕಾಯಿಲೆಗಳು ಮತ್ತು ಕುಂಠಿತ ಬೆಳವಣಿಗೆಯ ತೊಂದರೆ ಬಗ್ಗೆ ತಪಾಸಣೆ ಮತ್ತು ಚಿಕಿತ್ಸೆ ಒದಗಿಸಲು ವೈದ್ಯಕೀಯ ಶಾಲಾ ಆರೋಗ್ಯ ತಂಡವನ್ನು ರಚಿಸಲಾಗಿದೆ. ಈ ತಂಡಗಳು ಅಂಗನವಾಡಿ ಕೇಂದ್ರಗಳಲ್ಲಿ ಹಾಗೂ ಎಲ್ಲಾ ಶಾಲೆಗಳಲ್ಲಿ ಕಡ್ಡಾಯವಾಗಿ ವೈದ್ಯಕೀಯ ತಪಾಸಣೆ ನಡೆಸುವಂತಾಗಬೇಕು. ಈ ಹಿನ್ನಲೆಯಲ್ಲಿ ಆರೋಗ್ಯ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಮತ್ತು ವೈದ್ಯಾಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಟಿ.ಲಿಂಗರಾಜು ಮಾತನಾಡಿ, ಆಜನ್ಮ ನ್ಯೂನ್ಯತೆಯಲ್ಲಿ ನರದೋಷ, ಡೌನ್ ಸಿಂಡ್ರೋಮ್, ಸೀಳು ತುಟಿ, ವಕ್ರಪಾಸ, ಜನ್ಮಜಾತ ಕಣ್ಣಿನ ಪೊರೆ, ಕಿವುಡು, ಹೃದಯ ಕಾಯಿಲೆ ಸಮಸ್ಯೆಗಳು ಒಳಗೊಂಡಿದೆ. ಕುಂಠಿತ ಬೆಳವಣಿಗೆಯಲ್ಲಿ ದೃಷ್ಟಿ , ಶ್ರವಣ, ಜ್ಞಾನ ಗ್ರಹಣ, ಭಾಷೆ ನಡವಳಿಕೆ, ಕಲಿಕೆ ಇತ್ಯಾದಿ. ಪೌಷ್ಠಿಕಾಂಶದ ಕೊರತೆಯಿಂದ ಅಪೌಷ್ಠಿಕತೆ, ಎ ಮತ್ತು ಡಿ ಅನ್ನಾಂಗದ ಕೊರತೆಯಿಂದ ದೃಷ್ಟಿ ಹೀನತೆ, ಚರ್ಮಕ್ಕೆ ಸಂಬಂಧಿಸಿದ ತೊಂದರೆ, ಅಯೋಡಿನ್ ಕೊರತೆಯಿಂದ ಗಳಗಂಡ ರೋಗ ಬರಬಹುದು. ಮಕ್ಕಳಲ್ಲಿ ಕಿವಿ ಸೋರುವುದು, ಹಲ್ಲಿನ ಸಮಸ್ಯೆ, ಸಾಮಾನ್ಯ ಜ್ವರ, ಶ್ವಾಸಕೋಶದ ಸೋಂಕು, ಚರ್ಮದ ಕಾಯಿಲೆ ಮುಂತಾದ ಸಮಸ್ಯೆ ಕಾಣಿಸಿಕೊಂಡರೆ ಈ ಕಾರ್ಯಕ್ರಮದಡಿ ತಪಾಸಣೆ, ಪತ್ತೆ ಹಚ್ಚುವಿಕೆ, ಚಿಕಿತ್ಸೆ, ರೆಫರಲ್ ಹಾಗೂ ಅನುಸರಣೆಯನ್ನು ಉಚಿತವಾಗಿ ಬಿಪಿಎಲ್ ಹಾಗೂ ಎಪಿಎಲ್ ಕುಟುಂಬಕ್ಕೆ ಒದಗಿಸಲಾಗುತ್ತದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಪ್ರಕಾಶ ವಿ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ರವಿಂದ್ರನಾಥ ಎಂ.ಹೆಚ್., ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಂದಕುಮಾರ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ ಪ್ರಕಾಶ್ ಹೆಚ್., ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ ಶಶೀಧರ ಎ. ಸೇರಿದಂತೆ ವಿವಿಧ ತಾಲ್ಲೂಕುಗಳ ತಾಲ್ಲೂಕಾ ಆರೋಗ್ಯಾಧಿಕಾರಿಗಳು, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು, ಜಿಲ್ಲಾಸ್ಪತ್ರೆಯ ತಜ್ಞವೈದ್ಯರು, ಆರೋಗ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಅರಣ್ಯ ಸಂರಕ್ಷಣೆ, ವನ್ಯಜೀವಿ ರಕ್ಷಣೆಗೆ ಕೈಜೋಡಿಸಿ : ಕಾವ್ಯ ಚತುರ್ವೇದಿ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಇಂದಿನ ಪರಿಸ್ಥಿತಿಯಲ್ಲಿ ಕಾಡು, ವನ್ಯಜೀವಿಗಳ ನಾಶ, ಅರಣ್ಯ ಪ್ರದೇಶ ಒತ್ತುವರಿ, ವನ್ಯಜೀವಿ ಸಂಘರ್ಷ ಮುಂತಾದ ಕಾರಣಗಳಿಂದ ಒತ್ತಡದಲ್ಲಿದ್ದು, ಅರಣ್ಯ ಇಲಾಖೆಯು ಅರಣ್ಯ ಸಂರಕ್ಷಣೆ ಜೊತೆಗೆ ವನ್ಯಜೀವಿಗಳ ಉಳಿವಿಗಾಗಿ ಶ್ರಮಿಸುತ್ತಿದೆ. ಇದಕ್ಕೆ ಪ್ರತಿಯೊಬ್ಬರೂ ಕೈಜೋಡಿಸಿ ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಕಾವ್ಯ ಚತುರ್ವೇದಿ ಹೇಳಿದರು.

ಕನಕಗಿರಿ ತಾಲೂಕಿನ ಬಂಕಾಪುರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ 70ನೇ ವನ್ಯಜೀವಿ ಸಪ್ತಾಹ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು,

ವಲಯ ಅರಣ್ಯಾಧಿಕಾರಿ ಸುಭಾಸಚಂದ್ರ ನಾಯಕ ಮಾತನಾಡಿ, ಪರಿಸರದಲ್ಲಿ ಪ್ರತಿಯೊಂದು ಜೀವಿಯು ಮುಖ್ಯವಾಗಿದ್ದು, ಪ್ರತಿಯೊಂದು ಪ್ರಾಣಿಯೂ ಇನ್ನೊಂದರ ಮೇಲೆ ಅವಲಂಬನೆಯಾಗಿದ್ದು, ಆಹಾರ ಸರಪಳಿ ಕ್ರಮವಾಗಿದೆ. ಈ ಆಹಾರ ಸರಪಳಿ ಕಾಡು ನಾಶ, ಒತ್ತುವರಿ, ಕೀಟನಾಶಕ ಬಳಕೆಯಿಂದ ತುಂಡಾಗಿದ್ದು, ಪರಿಸರ ರಕ್ಷಣೆಗಾಗಿ ಇಲಾಖೆಯೊಂದಿಗೆ ಜನರ ಸಹಕಾರ ಅಗತ್ಯವೆಂದು ಹೇಳಿದರು.

ಗ್ರಾಮ ಅರಣ್ಯ ಸಮಿತಿ ಅಧ್ಯಕ್ಷ ಮಂಜುನಾಥ ಮಾತನಾಡಿ, ಅರಣ್ಯ ಇಲಾಖೆ ಈ ಹಿಂದೆ ಬಂಕಾಪುರ ಗ್ರಾಮದಲ್ಲಿ ಗ್ರಾಮ ಅರಣ್ಯ ಸಮಿತಿ ರಚನೆ ಮಾಡಿ ಊರ ಜನರಿಗೆ ಎತ್ತಿನ ಬಂಡಿ, ಶಾಲೆಗೆ ಡೆಸ್ಕ್ ಮತ್ತು ಕಟ್ಟಡ ಕೂಡ ನಿರ್ಮಿಸಿ ಕೊಟ್ಟಿದೆ. ಊರ ಜನರು ಅರಣ್ಯ ಇಲಾಖೆಯೊಂದಿಗೆ ಸಹಕಾರದೊಂದಿಗಿದ್ದು, ಇಲಾಖೆ ಕೂಡ ನಮಗೆ ಇಲಾಖೆಯಿಂದ ಇರುವ ಯೋಜನೆ ತಲುಪಿಸಬೇಕು ಎಂದು ತಿಳಿಸಿದರು.

ಕೊಪ್ಪಳ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಎ.ಎಚ್.ಮುಲ್ಲಾ ಮಾತನಾಡಿ, ಪ್ರತಿಯೊಂದು ಪ್ರದೇಶವು ವಿಶೇಷ, ವಿಭಿನ್ನವಾಗಿದ್ದು, ಇಲ್ಲಿ ಕರಡಿ, ಚಿರತೆ ಹೈನಾ, ತೋಳ, ನರಿ, ನೀರು ನಾಯಿ, ಇನ್ನೂ ಮುಂತಾದ ವನ್ಯಜೀವಿಗಳ ಆವಾಸಸ್ಥಾನವಾಗಿದೆ ಎಂದರು.

ಈ ಸಂದಂರ್ಭದಲ್ಲಿ ಮುನಿರಾಬಾದ್ ವಲಯ ಅರಣ್ಯಾಧಿಕಾರಿ ಸ್ವಾತಿ ಎಲ್., ಕುಷ್ಟಗಿ ವಲಯ ಅರಣ್ಯಾಧಿಕಾರಿ ಶಿವರಾಜ್ ಮೇಟಿ, ಎಸ್.ಡಿ.ಎಂ.ಸಿ ಅಧ್ಯಕ್ಷ ಯಮನೂರಪ್ಪ, ಗ್ರಾಮ ಪಂಚಾಯತ್ ಸದಸ್ಯರುಗಳಾದ ಲಕ್ಷಮ್ಮ, ಪಾಮಣ್ಣ ಸೊಲ್ಲರ್, ಶಾಲೆ ಶಿಕ್ಷಕರು, ಮಕ್ಕಳು, ಗ್ರಾಮಸ್ಥರು ಮತ್ತು ಆಡಳಿತ ಸಿಬ್ಬಂದಿಗಳು ಸೇರಿದಂತೆ ಮತ್ತಿತರರಿದ್ದರು.

ಗದಗ ಎಸ್‌ಎಸ್‌ಕೆ ಸಮಾಜದ ನಮ್ಮೂರು ದಸರಾ ಕಾರ್ಯಕ್ರಮದಲ್ಲಿ ಟಿ.ಎನ್. ಬಾಂಡಗೆ ಅಭಿಮತ

# 'ಎಸ್‌ಎಸ್‌ಕೆ' ಪ್ರತಿಭೆಗಳಿಗೆ ವೇದಿಕೆ ಒದಗಿಸಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮೂರು ದಸರಾ ಉತ್ಸವವನ್ನು ಗದಗ ಎಸ್‌ಎಸ್‌ಕೆ ಸಮಾಜ ಬಾಂಧವರು ಅದ್ದೂರಿಯಾಗಿ ಆಚರಿಸಿಕೊಂಡು ಬರುತ್ತಿರುವುದು ಸಂತಸ ಮೂಡಿಸಿದೆ ಎಂದು ನ್ಯಾಯವಾದಿ ಹಾಗೂ ಚಕ್ರವರ್ತಿ ದಿನಪತ್ರಿಕೆಯ ಸಹ ಸಂಪಾದಕರಾದ ಟಿ.ಎನ್. ಬಾಂಡಗೆ ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರಬಾರ ವೇದಿಕೆಯಲ್ಲಿ ಜರುಗಿದ 'ನಮ್ಮೂರು ದಸರಾ-2024' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿ, ದಸರಾ ಹಬ್ಬವೆಂದರೆ ಎಸ್.ಎಸ್.ಕೆ ಸಮಾಜ ಬಾಂಧವರಿಗೆ ಧರ್ಮಾಚರಣೆ, ಸಂಭ್ರಾಮಾಚರಣೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಎಲ್ಲರೂ ಒಟ್ಟಾಗಿ ಆಚರಿಸುವ ಹಬ್ಬವಾಗಿದೆ. ಈ ದಸರಾ ಉತ್ಸವದಲ್ಲಿ ಬೆಳಿಗ್ಗೆ ಶ್ರೀದೇವಿಗೆ ವಿಶೇಷ ಪೂಜೆ ಸಲ್ಲಿಸಲಾಗುತ್ತದೆ. ಪ್ರತಿದಿನ ಸಂಜೆ ಯುವ ಸಮೂಹಕ್ಕೆ ಮತ್ತು ಮಕ್ಕಳಿಗಾಗಿ ದಾಂಡಿಯಾ, ಫ್ಯಾಶನ್ ಶೋ, ಸಂಗೀತ ಕಾರ್ಯಕ್ರಮ ಸೇರಿದಂತೆ ಹಲವಾರು ಮನರಂಜನಾ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಮೂಲಕ ಗದಗ ಎಸ್.ಎಸ್.ಕೆ ಸಮಾಜ ದಸರಾ ಹಬ್ಬವನ್ನು ಯಶಸ್ವಿಯಾಗಿ ಆಚರಿಸಿಕೊಂಡು ಬರುತ್ತಿರುವದರಿಂದ ಎಸ್‌ಎಸ್‌ಕೆ ಸಮಾಜದಲ್ಲಿರುವ ಪ್ರತಿಭೆಗಳಿಗೆ ಸೂಕ್ತ ವೇದಿಕೆ ಕಲ್ಪಿಸಿಕೊಟ್ಟಂತಾಗಿದೆ.



ಮುಂದಿನ ದಿನಗಳಲ್ಲಿ ಇದೇ ರೀತಿ ಹೆಚ್ಚು ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಗದಗ ಎಸ್‌ಎಸ್‌ಕೆ ಸಮಾಜ ಮಾದರಿಯಾಗಬೇಕು. ಹಿರಿಯರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ಇಂದಿನ ಯುವಕರು ದಸರಾ ಹಬ್ಬವನ್ನು ಅದ್ದೂರಿಯಾಗಿ ಮುನ್ನಡೆಸಿಕೊಂಡು ಬರುತ್ತಿರುವುದು ಶ್ಲಾಘನೀಯವಾಗಿದೆ ಎಂದು ಟಿ.ಎನ್. ಬಾಂಡಗೆ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಎಸ್.ಎಸ್.ಕೆ ಸಮಾಜ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ವಹಿಸಿದ್ದರು. ವೇದಿಕೆ ಮೇಲೆ ಎಸ್.ಎಸ್.ಕೆ. ಸಮಾಜದ ಹಿರಿಯರು ಹಾಗೂ ಗಣ್ಯ ವ್ಯಾಪಾರಸ್ಥರಾದ ಜವಾಹರಲಾಲಸಾ ಖೋಡೆ, ಪಂಚ ಕಮಿಟಿಯ ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ, ಕಾರ್ಯದರ್ಶಿ ರವಿ ಶಿದ್ಲಿಂಗ, ದಸರಾ ಕಮಿಟಿಯ ಚೇರಮನ್ ವಿಷ್ಣುಸಾ ಶಿದ್ಲಿಂಗ ಉಪಸ್ಥಿತರಿದ್ದರು.

ಅನಿಲ್ ಖಟವಟೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಪಂಚ ಕಮಿಟಿಯ ಸದಸ್ಯರಾದ ಸುರೇಶಕುಮಾರ ಬದಿ, ಮಾರುತಿ ಪವಾರ, ಬಲರಾಮ ಬಸವಾ, ಶ್ರೀನಿವಾಸ ಬಾಂಡಗೆ, ಮೋತಿಲಾಲಸಾ ಪೂಜಾರಿ, ಪರಶುರಾಮಸಾ ಬದಿ, ವಿನೋದ ಬಾಂಡಗೆ, ಪ್ರಕಾಶ ಬಾಕಳೆ, ಅಂಬಾಸಾ ಖಟವಟೆ, ಸಾಗರ ಪವಾರ, ಸತೀಶ ದೇವಳೆ, ಶ್ರೀಕಾಂತ ಬಾಕಳೆ, ನಾಗರಾಜ ಖೋಡೆ, ಸುಧೀರ ಕಾಟೀಗರ, ರಾಮಚಂದ್ರಸಾ ಶಿದ್ಲಿಂಗ, ಉಮಾಬಾಯಿ ಬೇವಿನಕಟ್ಟಿ, ಸ್ನೇಹಲತಾ ಕಬಾಡಿ, ರೇಣುಕಾಬಾಯಿ ಕಲಬುರ್ಗಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ಜಿ.ಎನ್. ಹಬೀಬ ಕಾರ್ಯಕ್ರಮ ನಿರೂಪಿಸಿದರು. ಪ್ರವೀಣ ಜಿತೂರಿ ವಂದಿಸಿದರು.

## ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಿದ ಕ್ರೀಡಾಪಟುಗಳ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆಪ್ಟೆಂಬರ್ 24 ಮತ್ತು 25 ರಂದು ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣ ಆಯೋಜಿಸಲಾಗಿತ್ತು.

ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಿ ವಿಜೇತರಾದ ಕ್ರೀಡಾಪಟುಗಳು ಬೆಳಗಾವಿ ವಿಭಾಗದ ವಿವಿಧ ಜಿಲ್ಲೆಗಳಲ್ಲಿ ಆಯೋಜಿಸಲಾದ ಕ್ರೀಡಾಕೂಟದಲ್ಲಿ ಭಾಗವಹಿಸಿದ ಕ್ರೀಡಾಪಟುಗಳ ಪ್ರಂಯಾಣಭ'ತ್ಯೆಂಯುನ್ನು ಪಾವತಿಸಬೇಕಾಗಿದೆ.

ಗದಗ ಜಿಲ್ಲೆಯಿಂದ ಭಾಗವಹಿಸಿದ ಕ್ರೀಡಾಪಟುಗಳು ತಮ್ಮ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್ ಜೆರಾಕ್ಸ್ ಪ್ರತಿ ಹಾಗೂ ಆಯಾ ಜಿಲ್ಲೆಯ ಉಪ/ಸಹಾಯಕ ನಿರ್ದೇಶಕರು ನೀಡಿದ ಹಾಜರಾತಿಯನ್ನು ಅಕ್ಟೋಬರ್ 14ರೊಳಗಾಗಿ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಸಹಾಯಕ ನಿರ್ದೇಶಕರ ಕಾರ್ಯಾಲಯಕ್ಕೆ ಒದಗಿಸಲು ತಿಳಿಸಲಾಗಿದೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ಪುರಸಭೆಯ ಡೇ-ನಲ್ಮ ಯೋಜನೆಯಡಿ ಸಮುಧಾಯ ಸಂಪನ್ಮೂಲ ವ್ಯಕ್ತಿ (ಸಿ.ಆರ್.ಪಿ.) ಹುದ್ದೆಗೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಗದಗ ಇವರಿಂದ ಅರ್ಜಿ ಅಹ್ವಾನಿಸಲು ಹೊರಡಿಸಿದ ಆದೇಶದನ್ವಯ ಮಹಿಳಾ ಅಭ್ಯರ್ಥಿಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಸೂಕ್ತ ದಾಖಲೆಗಳೊಂದಿಗೆ ರೋಣ ಪುರಸಭೆಯ ಡೇ ನಲ್ಮ ವಿಭಾಗದಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪುರಸಭೆಯ ಡೇ ನಲ್ಮ ವಿಭಾಗದಲ್ಲಿ ಸಂಪರ್ಕಿಸಬಹುದಾಗಿದೆ.


ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಹದಲಿ, ತಾ॥ ನರಗುಂದ, ಜಿ॥ ಗದಗ**

**ಇ-ಮೇಲ್ : hadli.nar.gdg@gmail.com, Phone : 9480865245**

ಸಂ.ಗ್ರಾ.ಪಂಹ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ : 09/10/2024

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಹದಲಿ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿಸಲು ಅರ್ಹ ಸಾಮಗ್ರಿ ಪೂರೈಕೆದಾರರಿಂದ ಕಾಮಗಾರಿವಾರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಕಛೇರಿ ಅವಧಿಯಲ್ಲಿ ಖುದ್ದಾಗಿ ಖಾಲಿ ಟೆಂಡರ್ ಪಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ ಸಂ | ಕಾಮಗಾರಿ ಹೆಸರು | ಅಂದಾಜು ಮೊತ್ತ | ಸಾಮಗ್ರಿ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|---|
| 01 | ಹದಲಿ ಗ್ರಾಮದ ನಿಂಗನಗೌಡ ತಮ್ಮನಗೌಡ್ರ ಇವರ ಮನೆಯಿಂದ ಶಾಂತವ್ವ ಬಾಚಾಲಾಪೂರ ಮನೆವರೆಗೆ ಮೆಟಲಿಂಗ ರಸ್ತೆ ನಿರ್ಮಾಣ | 150000 | 108072 | 1000 | ಖಾಲಿ ಟೆಂಡರ್ ಗ್ರಾಮ ಪಂಚಾಯತಿ-ಯಿಂದ ಪಡೆದು ಸಲ್ಲಿಸುವುದು |
| 02 | ಹದಲಿ ಗ್ರಾಮದ ಕುಲಕರ್ಣಿಯವರ ಪ್ಲಾಟಿನಲ್ಲಿ ಮೇನ್ ರಸ್ತೆಯಿಂದ ಅಂಕಲಿ ಮನೆವರೆಗೆ ಮೆಟಲಿಂಗ ರಸ್ತೆ ನಿರ್ಮಾಣ | 150000 | 104659 | 1000 | |
| 03 | ಹದಲಿ ಗ್ರಾಮದ ಸಿದ್ದಪ್ಪ ಹಕ್ಕಿಯವರ ಹೊಲದ ಹತ್ತಿರ ರಸ್ತೆಗೆ ಸಿ ಡಿ ನಿರ್ಮಾಣ | 120000 | 79093 | 1000 | |
| 04 | ಹದಲಿ ಗ್ರಾಮದ ಝುಡ್ ಪಿ ರಸ್ತೆಯಿಂದ ಮಾಳವಾಡ ಕರಮಡಿ ಮೆಟಲಿಂಗ ರಸ್ತೆ ನಿರ್ಮಾಣ | 150000 | 86031 | 1000 | |
| 05 | ಹದಲಿ ಗ್ರಾಮದ ರಮೇಶ ಕಮ್ಮಾರ ಇವರ ಮನೆಯಿಂದ ಝುಡ್ ಪಿ ರಸ್ತೆವರೆಗೆ ಗಟಾರ ನಿರ್ಮಾಣ | 270000 | 55755 | 1000 | |
| 06 | ಹದಲಿ ಗ್ರಾಮದ ಅಂಬೇಡ್ಕರ ಓಣಿಯ ಬಸ ನಿಲ್ದಾಣದಿಂದ ಸಿ ಡಿ ವರೆಗೆ ಗಟಾರ ನಿರ್ಮಾಣ | 300000 | 172773 | 1000 | |
| 07 | ಹದಲಿ ಗ್ರಾಮದ ಡಿ ಪಿ ವಿ ಪಿ ಶಾಲೆಯ ಕಂಪೌಂಡ ನಿರ್ಮಾಣ | 100000 | 65204 | 1000 | |
| 08 | ಹದಲಿ ಗ್ರಾಮದ ಸರಕಾರಿ ಪ್ರೌಡ ಶಾಲೆಯ ಶೌಚಾಲಯ ನಿರ್ಮಾಣ | 200000 | 132145 | 1000 | |
| 09 | ಹದಲಿ ಗ್ರಾಮದ ಡಿ ಪಿ ವಿಪಿ ಶಾಲೆಯ ಆಟದ ಮೈದಾನ ಅಭಿವೃದ್ಧಿ ಪಡಿಸುವುದು | 100000 | 59406 | 1000 | |

**ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ವಿತರಿಸುವ ದಿನಾಂಕ : 09/10/2024** ರಿಂದ **25/10/2024** ರ ಒಳಗಾಗಿ ಗ್ರಾಮ ಪಂಚಾಯತ ಕಾರ್ಯಾಲಯದ ಕಛೇರಿ ಸಮಯದಲ್ಲಿ ಪಡೆದು **ದಿನಾಂಕ : 09/10/2024** ರಿಂದ **25/10/2024** ರೊಳಗೆ, **ಭರ್ತಿ ಮಾಡಿ ದರಪಟ್ಟಿಗಳನ್ನು ಪ್ರತ್ಯೇಕವಾಗಿ ಕಾಮಗಾರಿವಾರು ಗ್ರಾಮ ಪಂಚಾಯತಿ ಕಚೇರಿಗೆ ಸಲ್ಲಿಸುವುದು**. ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಮೇಲ್ಕಂಡ ದಿನಾಂಕದೊಳಗೆ ಗ್ರಾಮ ಪಂಚಾಯತ ಕಾರ್ಯಾಲಯ ಹದಲಿಯಲ್ಲಿ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ, ಹದಲಿ**

**ಸಹಿ/- ಅಧ್ಯಕ್ಷರು ಗ್ರಾಮ ಪಂಚಾಯತ ಹದಲಿ**

ವಾಸಾಸಂಇ/ಗದಗ/ಕೆಎಸ್ಎಂಸಿಎ/283/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka